ಸಂಪುಟ : 9 ಸಂಚಿಕೆ 301 ಪುಟ : 4+2 ಬೆಲೆ: 3.00 ರವಿವಾರ ಜನವರಿ 12 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 301 Pages : 4+2 Price : 3.00 Sunday January 12 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಜಿಲ್ಲಾ ಉಸ್ತುವಾರಿ ಸಚಿವರ ಪ್ರವಾಸ



■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರು ಜನವರಿ 12ರಂದು ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು ವಿವರ ಈ ಕೆಳಗಿನಂತಿದೆ. ಜನವರಿ 12 ರಂದು ಬೆಳಿಗ್ಗೆ 9 ಗಂಟೆಗೆ ಹುಲಕೋಟಿಯ ಸ್ವಾಮಿ ವಿವೇಕಾನಂದ ಪಿಯು ಕಾಲೇಜು ಸಭಾಂಗಣದಲ್ಲಿ ಗುರುಭವನ ಕಟ್ಟಡದ ನೀಲನಕ್ಷೆ ಕುರಿತು ಸಭೆ ಜರಗಿಸುವರು. ನಂತರ ಬೆಳಗ್ಗೆ 10.30 ಗಂಟೆಗೆ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಏರ್ಪಡಿಸಿದ ಸ್ವಾಮಿ ವಿವೇಕಾನಂದ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಬೆಳಿಗ್ಗೆ 11 ಗಂಟೆಗೆ ಗದಗ ನಗರದ ಹೆಲ್ತ್ ಕ್ಯಾಂಪ್ ಟ್ರಸ್ಟ್ ಕಾರ್ಯಾಲಯದಲ್ಲಿ ಸೇವಾ ಭಾರತಿ ಟ್ರಸ್ಟ್ ಹೆಲ್ತ್ ಕ್ಯಾಂಪ್ ಬೆಟಗೇರಿ ಅವರ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಸಂಜೆ 5 ಗಂಟೆಗೆ ಬಿಂಕದಕಟ್ಟಿ ಪ್ರಾಥಮಿಕ ಸಹಕಾರಿ ಸಂಘದ ಆವರಣದಲ್ಲಿ ಸಹಕಾರ ರತ್ನ ದಿ. ಎಂ ವಿ ಮೂಲಿಮನಿ ಅವರ 94ನೇ ಜಯಂತ್ಯುತ್ಸವ ಹಾಗೂ ಗದಗ ಪರಿಸರದ ಸಹಕಾರಿಗಳು ಇವರ ಆಶ್ರಯದಲ್ಲಿ ಅಂತಾರಾಷ್ಟ್ರೀಯ ಸಹಕಾರಿ ವರ್ಷಾಚರಣೆ ಪ್ರಯುಕ್ತ ಸಹಕಾರಿ ಸಂಘದ ಹಿರಿಯ ಸಾಧಕರಿಗೆ ಸತ್ಕಾರ ಸಮಾರಂಭದಲ್ಲಿ ಪಾಲ್ಗೊಂಡು ನಂತರ ರಾತ್ರಿ 8 ಗಂಟೆಗೆ ರಸ್ತೆಯ ಮೂಲಕ ಹುಬ್ಬಳ್ಳಿಗೆ ಪ್ರಯಾಣ ಬೆಳೆಸುವರು. ಅಲ್ಲಿಂದ ರೈಲಿನ ಮೂಲಕ ಬೆಂಗಳೂರಿಗೆ ಪ್ರಯಾಣಿಸುವರು ಎಂದು ಸಚಿವರ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

## 'ವಚನ ದರ್ಶನ' ಸಮಾರೋಪ ಜ.13ಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಶ್ರೀಕ್ಷೇತ್ರ ಹರ್ತಿ ಗ್ರಾಮದಲ್ಲಿ ಹಿರೇವಡ್ಡಟ್ಟಿ – ಮಣಕವಾಡ ದೇವಮಂದಿರ ಮಹಾಮಠದ ಪೂಜ್ಯಶ್ರೀ ಅಭಿನವ ಮೃತ್ಯುಂಜಯ ಮಹಾಸ್ವಾಮಿಗಳಿಂದ ಜ. 2ರಿಂದ ಆರಂಭಗೊಂಡ ವಚನ ದರ್ಶನ ಆಧ್ಯಾತ್ಮಿಕ ಪ್ರವಚನವು ಜ. 13ರಂದು ಸಂಜೆ 6.30 ಗಂಟೆಗೆ ಮಂಗಲ ಸಮಾರೋಪಗೊಳ್ಳಲಿದೆ. ಕಾರ್ಯಕ್ರಮದಲ್ಲಿ ಹಾವೇರಿ ಹುಕ್ಕೇರಿಮಠದ ಶ್ರೀಮದ್ ವೀರಶೈವ ಶಿವಯೋಗ ಮಂದಿರದ ಉಪಾಧ್ಯಕ್ಷರಾದ ಪೂಜ್ಯಶ್ರೀ ಸದಾಶಿವ ಮಹಾಸ್ವಾಮಿಗಳು ಹಾಗೂ ಹುಬ್ಬಳ್ಳಿ–ವಿಜಯಪುರದ ಶಾಂತಾಶ್ರಮದ ಪೂಜ್ಯಶ್ರೀ ಸದ್ಗುರು ಅಭಿನವ ಸಿದ್ಧಾರೂಢ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಿವರು. ಮುಖ್ಯ ಅತಿಥಿಗಳಾಗಿ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ, ಸಂಸದರು ಹಾಗೂ ಮಾಜಿ ಮುಖ್ಯಮಂತ್ರಿಗಳಾದ ಬಸವರಾಜ ಬೊಮ್ಮಾಯಿ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ. ಸಂಕನೂರ, ಮುಳಗುಂದದ ಬಿ.ಸಿ. ಬಂಗಾರಿ ಪ್ರಾಥಮಿಕ ಶಾಲೆಯ ಅಧ್ಯಕ್ಷರಾದ ಷಣ್ಮುಖಪ್ಪ ಬಡ್ನಿ, ಕುರ್ತಕೋಟಿ ಗ್ರಾ.ಪಂ ಮಾಜಿ ಅಧ್ಯಕ್ಷ ಅಪ್ಪಣ್ಣ ಇನಾಮತಿ, ಗುತ್ತಿಗೆದಾರ ಕೆ.ವಿ. ಹಂಚಿನಾಳ, ಮೋಹನ ದುರಗಣ್ಣವರ ಮುಂತಾದವರು ಆಗಮಿಸುವರು. ಜ. 2ರಿಂದ 13ರವರೆಗೆ ವಚನ ದರ್ಶನ ಆಧ್ಯಾತ್ಮಿಕ ಪ್ರವಚನದಲ್ಲಿ ಸಂಗೀತ ಸೇವೆ ನೀಡಿದ ಕಲಬುರಗಿಯ ಪಂ. ಸಂಗಮೇಶ ಪಾಟೀಲ ಹಾಗೂ ತಬಲಾ ಸಾಥ್ ನೀಡಿದ ಕರಡಕಲ್ಲಿನ ತೋಟೇಂದ್ರ ಕುಮಾರ ಅವರನ್ನು ಹಾಗೂ ಈ ಕಾರ್ಯಕ್ರಮಕ್ಕೆ ಸಹಾಚು–ಸಹಕಾರ ನೀಡಿದ ದಾನಿಗಳನ್ನು ಸನ್ಮಾನಿಸಲಾಗುವುದು ಎಂದು ವಚನ ದರ್ಶನ ಆಧ್ಯಾತ್ಮಿಕ ಪ್ರವಚನ ಸೇವಾ ಸಮಿತಿ ಹಾಗೂ ಹರ್ತಿ ಗ್ರಾಮದ ಗುರು–ಹಿರಿಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜಕ್ಕಲಿ ಗ್ರಾಮದಲ್ಲಿ ಪುಸ್ತಕದ ಗೂಡು ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಶಾಸಕ ಜಿ.ಎಸ್. ಪಾಟೀಲ

# ಪುಸ್ತಕ ಓದುವ ಹವ್ಯಾಸ ಬೆಳೆಸಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ರೋಣ

ಗ್ರಾಮಸ್ಥರು ಪುಸ್ತಕ ಓದುವ ಹವ್ಯಾಸವನ್ನು ಬೆಳೆಸಿಕೊಳ್ಳುವ ಮೂಲಕ ಜ್ಞಾನ ವೃದ್ಧಿ ಮಾಡಿಕೊಳ್ಳಿ. ಶಾಲಾ ಮಕ್ಕಳು ಪುಸ್ತಕ ಗೂಡನ್ನು ಹೆಚ್ಚು ಬಳಕೆ ಮಾಡಿಕೊಳ್ಳಬೇಕಿದೆ ಎಂದು ಶಾಸಕ ಜಿ.ಎಸ್. ಪಾಟೀಲ ಸಲಹೆ ನೀಡಿದರು. ಗದಗ ಜಿಲ್ಲೆಯಲ್ಲಿ ಮೊದಲ ಬಾರಿಗೆ ರೋಣ ತಾಲೂಕಿನ ಜಕ್ಕಲಿ ಗ್ರಾ.ಪಂ ಆವರಣದ ಎದುರಿನ ಬಸ್ ನಿಲ್ದಾಣದಲ್ಲಿ ತಾ.ಪಂ ಸಹಯೋಗದೊಂದಿಗೆ 'ಪುಸ್ತಕದ ಗೂಡು' ಎಂಬ ವಿನೂತನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಮುಂದಿನ ದಿನಗಳಲ್ಲಿ ಇದೇ ಮಾದರಿಯಲ್ಲಿ ತಾಲೂಕಿನ ಎಲ್ಲಾ ಗ್ರಾ.ಪಂಗಳಲ್ಲಿ ಈ ಕಾರ್ಯಕ್ರಮ ಯಶಸ್ವಿಗೊಳಿಸಲು ಪ್ರಯತ್ನಿಸಲಾಗುವುದು. ಓದುಗರಿಗೆ ತನ್ನ ವಾಸಸ್ಥಾನದಲ್ಲಿಯೇ ಒಂದು ವೇದಿಕೆ ಕಲ್ಪಿಸುವುದಕ್ಕಾಗಿ ಈ ಕಾರ್ಯಕ್ರಮ ಮಾಡಲಾಗಿದೆ. ಮುಂದಿನ ದಿನಗಳಲ್ಲಿ ಈ ಕಾರ್ಯಕ್ರಮ ಯಶಸ್ವಿಯಾಗಿ ಮುನ್ನಡೆ ಸಾಧಿಸಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.



ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ.ಕಂದಕೂರ ಮಾತನಾಡಿ, ಬಸ್ ನಿಲ್ದಾಣಗಳಲ್ಲಿ, ಉದ್ಯಾನಗಳಲ್ಲಿ, ಸಾರ್ವಜನಿಕ ಕಚೇರಿಗಳಲ್ಲಿ ಜನರ ಬಿಡುವಿನ ಸಮಯದಲ್ಲಿ ಪುಸ್ತಕ ಓದುವ ಹವ್ಯಾಸ ಮೂಡಲಿ ಎಂಬ ಧ್ಯೇಯದೊಂದಿಗೆ ಈ ಪುಸ್ತಕ ಗೂಡುಗಳನ್ನು ನಿರ್ಮಿಸಲಾಗಿದೆ. ಇಲ್ಲಿ ಕಥೆ, ಕಾದಂಬರಿ, ನಿಯತಕಾಲಿಕೆಗಳಿದ್ದು, ಲಭ್ಯವಿರುವ ಪುಸ್ತಕಗಳನ್ನು ಓದುವ ಇಲ್ಲವೇ ಮನೆಗೆ ತೆಗೆದುಕೊಂಡು ಓದಿ ಮರಳಿ ಗೂಡಿಗೆ ತಂದಿಡಲು ಅವಕಾಶವಿದೆ.

ಇದು ಜನರಿಗೆ ಓದುವ ಹವ್ಯಾಸ ಮೂಡಿಸುವ ಉತ್ತಮ ಪರಿಕಲ್ಪನೆಯಾಗಿದೆ. ಜತೆಗೆ ಎಲ್ಲ ವಯೋಮಾನದ ಓದುಗರಿಗೆ ಆಸಕ್ತಿದಾಯಕವಾಗುವಂತೆ ಪುಸ್ತಕದ ಗೂಡು ವೇದಿಕೆ ಏರ್ಪಡಿಸುವ ಉದ್ದೇಶ ಒಳಗೊಂಡಿದೆ. ಅತಿ ಕಡಿಮೆ ವೆಚ್ಚದಲ್ಲಿ ಬೆಲೆ ಕಟ್ಟಲಾಗದ ಜ್ಞಾನವನ್ನು ಹಂಚುವ ಕಾರ್ಯ ಕೈಗೆತ್ತಿಕೊಂಡಿದ್ದು, ಮುಂದಿನ ದಿನಗಳಲ್ಲಿ ತಾಲೂಕು ವ್ಯಾಪ್ತಿಯ 22 ಗ್ರಾ.ಪಂಗಳಲ್ಲಿ ಈ ಕಾರ್ಯಕ್ರಮ ಅನುಷ್ಠಾನ ಮಾಡಲಾಗುವುದು ಎಂದು ತಿಳಿಸಿದರು.

ಗ್ರಾ.ಪಂ ಪಿಡಿಒ ಶಿವಯೋಗಿ ರಿತ್ತಿ, ಗ್ರಾ.ಪಂ ಅಧ್ಯಕ್ಷ, ಉಪಾಧ್ಯಕ್ಷರು, ಸದಸ್ಯರು, ಸಿಬ್ಬಂದಿಗಳು ಸೇರಿದಂತೆ ಗ್ರಾಮಸ್ಥರು ಹಾಜರಿದ್ದರು.

ಜಕ್ಕಲಿ ಗ್ರಾಮದ ಅಂದಾನಪ್ಪ ದೊಡ್ಡಮೇಟಿ ಪ್ರೌಢಶಾಲೆಯಲ್ಲಿ ನರೇಗಾ ಯೋಜನೆಯಡಿ ಅನುಷ್ಠಾನಗೊಳಿಸಲಾದ ಅಡುಗೆ ಕೋಣೆಯನ್ನು ಶಾಸಕ ಜಿ.ಎಸ್. ಪಾಟೀಲ ಲೋಕಾರ್ಪಣೆಗೊಳಿಸಿದರು. ಈ ಸಂದರ್ಭದಲ್ಲಿ ತಾ.ಪಂ ಇಒ, ಪಿಡಿಒ, ಗ್ರಾ.ಪಂ ಅಧ್ಯಕ್ಷರು, ಉಪಾಧ್ಯಕ್ಷರು ಸೇರಿದಂತೆ ಗ್ರಾಮಸ್ಥರು ಹಾಜರಿದ್ದರು.

### ಶಿಗ್ಲಿ ಗ್ರಾಮದಲ್ಲಿ ಲಿಂಗರಾಜರ ಜನ್ಮದಿನದ ಅಂಗವಾಗಿ ಪ್ರತಿಮೆಗೆ ಪೂಜೆ

# ಶಿರಸಂಗಿ ಲಿಂಗರಾಜರು ಶಿಗ್ಲಿಯ ಹೆಮ್ಮೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶಿಕ್ಷಣ ಸೇವೆಯೇ ದೇವರ ಸೇವೆ ಎಂದು ಶಿಕ್ಷಣಕ್ಕಾಗಿ ಸರ್ವಸ್ವವನ್ನು ತ್ಯಾಗಮಾಡಿದ ಶ್ರೇಷ್ಠ ಪುರುಷ, ತ್ಯಾಗವೀರ ಶಿರಸಂಗಿ ಲಿಂಗರಾಜರು ಶಿಗ್ಲಿಯ ಹೆಮ್ಮೆಯಾಗಿದ್ದು, ಅವರು ಎಂದೆಂದಿಗೂ ಅಜರಾಮರರು ಎಂದು ಲಿಂಗರಾಜರ ವಂಶಸ್ಥರಾದ ಶಂಕ್ರಣ್ಣ ಹೇಳಿದರು.

ಅವರು ಶುಕ್ರವಾರ ಶಿರಸಂಗಿ ಲಿಂಗರಾಜರ ಜನ್ಮಭೂಮಿ ಶಿಗ್ಲಿ ಗ್ರಾಮದಲ್ಲಿ ಲಿಂಗರಾಜರ ಜನ್ಮದಿನದ ಅಂಗವಾಗಿ ಅವರ ಪ್ರತಿಮೆಗೆ ಪೂಜೆ ಸಲ್ಲಿಸಿದ ಸಂದರ್ಭದಲ್ಲಿ ಮಾತನಾಡಿ, ಶಿಕ್ಷಣ, ಸಮಾಜ, ಕೃಷಿ, ವ್ಯಾಪಾರ ಹೀಗೆ ಮನುಷ್ಯನ ಬದುಕಿಗೆ ಪೂರಕವಾದ ಅನೇಕ ಕ್ಷೇತ್ರಗಳಲ್ಲಿ ಆಮೂಲಾಗ್ರ ಬದಲಾವಣೆ ತರುವ ಮೂಲಕ ಸಮಾಜದ ಅಭಿವೃದ್ಧಿಗೆ ತಮ್ಮನ್ನು ಸಮರ್ಪಿಸಿಕೊಂಡ ಮಹಾನ್ ಪುರುಷರಾಗಿದ್ದಾರೆ. ಶಿಕ್ಷಣದಿಂದ ಮಾತ್ರ ಸದೃಢ ಸಮಾಜ, ಸಮೃದ್ಧ ದೇಶ ಕಟ್ಟಲು ಸಾಧ್ಯ ಎಂದು ತಮ್ಮೆಲ್ಲ ಸಂಪತ್ತನ್ನು ಶಿಕ್ಷಣ ಕ್ಷೇತ್ರಕ್ಕೆ ಧಾರೆಯೆರೆದ್ದಾರೆ ಎಂದರು.



ಈಗಲೂ ಇರುವ ಅವರ ಆಡಿ ಬೆಳೆದ ತೊಟ್ಟಿಲಿಗೆ ಮತ್ತು ಲಿಂಗರಾಜರದ ಪುತ್ಥಳಿಗೆ ಅಭಿಷೇಕ, ವಿಶೇಷ ಪೂಜೆ ಸಲ್ಲಿಸುವ ಮೂಲಕ 159ನೇ ಜನ್ಮ ದಿನಾಚರಣೆ ಆಚರಿಸಲಾಯಿತು. ಹಿರಿಯರಾದ ಸಿದ್ದಪ್ಪ ಪೂಜಾರ, ರಾಮಣ್ಣ ಲಮಾಣಿ, ಮಹಾದೇವಪ್ಪ ಬೆಳವಗಿ, ಬಸವರಾಜ ಮಡ್ಲಿ, ಚನ್ನಬಸಪ್ಪ ಅಣ್ಣಿಗೇರಿ, ಪರಮೇಶ್ವರಪ್ಪ ಸ್ವಾದಿ, ರಾಮಣ್ಣ ಹುಲಗೂರ, ಮಂಜುನಾಥ ಅಣ್ಣಿಗೇರಿ, ಮಹಾದೇವಪ್ಪ ಹುಲಗೂರ, ಮಲ್ಲೇಶಪ್ಪ ರೊಳ್ಳಿ, ಮಂಜುನಾಥ ದೇಸಾಯಿ, ಶಿವಪ್ಪ ಹುಲಗೂರ, ರಾಮಣ್ಣ ಕಲಕೋಟಿ ಸೇರಿ ಅನೇಕರಿದ್ದರು. ಗ್ರಾಮದ ಗ್ರಾಮಾಂತರ ಶಿಕ್ಷಣ ಸಂಸ್ಥೆ, ಎಸ್.ಎಸ್. ಕೂಡ್ಲಮಠ ಮತ್ತು ನವಚೇತನ ಶಾಲಾ ಮಕ್ಕಳು, ಯುವಕರು ಪಾಲ್ಗೊಂಡಿದ್ದರು.

ಹಿರಿಯರಾದ ಸೋಮಣ್ಣ ಡಾಣಗಲ್ ಮಾತನಾಡಿ, ಉತ್ತರ ಕರ್ನಾಟಕದ ಪ್ರತಿಷ್ಠಿತ ಕೆಎಲ್‌ಇ ಸೊಸೈಟಿಯ ಅಭಿವೃದ್ಧಿಗೆ ಮೂಲ ಕಾರಣ ಪುರುಷರೇ ಲಿಂಗರಾಜರು ಎಂಬುದು ಸ್ಪಷ್ಟ. ಲಿಂಗರಾಜರ ಆದರ್ಶಗಳು ಇಂದಿನ ಸಮಾಜಕ್ಕೆ ದಾರಿದೀಪವಾಗಿವೆ. ಇಂತಹ ಮಹನೀಯರಿಗೆ ಜನ್ಮ ನೀಡಿದ ಶಿಗ್ಲಿ ಗ್ರಾಮದಲ್ಲಿ ಅವರ ಹೆಸರು ಸದಾ ಸ್ಮರಣೀಯವಾಗಿಸುವ ಕೆಲಸವಾಗಬೇಕಿದೆ ಎಂದರು.

### ಜಗಳೂರ ಕೆರೆಯ 11 ಎಕರೆ ಪ್ರದೇಶದಲ್ಲಿ ಟ್ರೀ ಪಾರ್ಕ್ ನಿರ್ಮಾಣ ಕಾರ್ಯಕ್ಕೆ ಶಾಸಕ ಜಿ.ಎಸ್. ಪಾಟೀಲ ಚಾಲನೆ

# ಜಿಗಳೂರ ಕೆರೆ ಪ್ರವಾಸಿ ತಾಣವಾಗಲಿದೆ

■ವಿಜಯಸಾಕ್ಷಿ ಸುದ್ದಿ, ರೋಣ

ಜಿಗಳೂರ ಕೆರೆಯ 11 ಎಕರೆ ಪ್ರದೇಶದಲ್ಲಿ ಅರಣ್ಯ ಇಲಾಖೆಯಿಂದ ಟ್ರೀ ಪಾರ್ಕ್ ನಿರ್ಮಿಸಲು ಈಗಾಗಲೇ ಕಾರ್ಯಾರಂಭವಾಗಿದ್ದು, ಅತಿ ಶೀಘ್ರದಲ್ಲಿ ಜಿಗಳೂರ ಕೆರೆ ಪ್ರವಾಸಿ ತಾಣವಾಗಲಿದೆ ಎಂದು ರಾಜ್ಯ ಖನಿಜ ನಿಗಮದ ಅಧ್ಯಕ್ಷ, ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಅವರು ಶನಿವಾರ ಪುರಸಭೆಯ ಆವರಣದಲ್ಲಿ ಜರುಗಿದ 99.83 ಲಕ್ಷ ರೂಗಳ



ಕುಡಿಯುವ ನೀರಿನ ಸಮಸ್ಯೆ ಪರಿಹರಿಸುವ ನಿಧಿ ಯೋಜನೆಯಡಿ ಕಾರ್ಯಕ್ರಮದ ಭೂಮಿ ಪೂಜೆಯನ್ನು ನೆರವೇರಿಸಿ ಮಾತನಾಡಿದರು.

ರೈತರ ಹಿತದೃಷ್ಟಿಯಿಂದ 2 ಎಕರೆ ಜಮೀನಿನಲ್ಲಿ 10 ಕೋಟಿ ರೂ ವೆಚ್ಚದಲ್ಲಿ ಕೋಲ್ಡ್ ಸ್ಟೋರೇಜ್ ನಿರ್ಮಾಣಕ್ಕೆ ಸಹ ಮುಂದಾಗಿದೆ. ಅಲ್ಲದೆ ತಾಲೂಕಿನ ಶಾಲಾ ಕೊಠಡಿಗಳ ಸುಕರ್ಷತೆಗಾಗಿ ಸಿಎಂ ವಿಶೇಷ ನಿಧಿಯಿಂದ 3 ಕೋಟಿ, ಎಸ್.ಆರ್. ಪಾಟೀಲ ಶಾಲಾ ಅಭಿವೃದ್ಧಿಗೆ ಎಂಎಂಎಲ್ ನಿಂದ 50 ಲಕ್ಷ ರೂ, ಸಿಎಂ ವಿಶೇಷ ನಿಧಿಯಿಂದ 50 ಲಕ್ಷ ರೂಗಳ ಅನುದಾನವನ್ನು ಒದಗಿಸಲಾಗಿದೆ. ಪುರಸಭೆಯ ವ್ಯಾಪ್ತಿಯಲ್ಲಿರುವ 37 ಎಕರೆ ಜಮೀನಿನಲ್ಲಿ ಬಡವರಿಗೆ ಆಶ್ರಯ ಒದಗಿಸಲು ಪುರಸಭೆ ಮುಂದಾಗಬೇಕು. ಮುಖ್ಯವಾಗಿ ಪುರಸಭೆಯ ನೂತನ ಕಟ್ಟಡಕ್ಕೆ ಶೀಘ್ರವೇ ಭೂಮಿಪೂಜೆ ನಡೆಸಲಾಗುವುದು ಎಂದು ಶಾಸಕ ಜಿ.ಎಸ್. ಪಾಟೀಲ ತಿಳಿಸಿದರು.

▶▶3ನೇ ಪುಟಕ್ಕೆ

## ಜಿಲ್ಲಾಧಿಕಾರಿಗಳಿಂದ ಸಿಂಗಟಾಲೂರ ಬ್ಯಾರೇಜ್ ವೀಕ್ಷಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ–ಬೆಟಗೇರಿ ಅವಳಿ ನಗರಕ್ಕೆ ನೀರು ಒದಗಿಸಲು ಪ್ರಮುಖ ನೀರಿನ ಮೂಲವಾದ ತುಂಗಭದ್ರಾ ನದಿಯ ನೀರೆತ್ತುವ ಸ್ಥಳವಾದ ಸಿಂಗಟಾಲೂರ ಬ್ಯಾರೇಜ್‌ನ್ನು ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ್ ವೀಕ್ಷಿಸಿದರು.

ಗದಗ–ಬೆಟಗೇರಿ ಅವಳಿ ನಗರಗಳಿಗೆ ನೀರು ಸರಬರಾಜು ಮಾಡುವಲ್ಲಿ ಇರುವ ತೊಂದರೆಗಳ ನಿವಾರಣೆಗೆ ಆದ್ಯತೆ ನೀಡೋ ಮೂಲಕ ಅಧಿಕಾರಿಗಳು ಕಾರ್ಯ ನಿರ್ವಹಿಸಬೇಕು. ನಗರ ಸಭೆಯ ಅಧಿಕಾರಿಗಳು ಹಾಗೂ ನೀರು ಸರಬರಾಜುಗೆ ಸಂಬಂಧಿಸಿದ ಇಲಾಖೆ ಅಧಿಕಾರಿಗಳು ಬೇಜವಾಬ್ದಾರಿ ತೊರೆದು, ಸರಿಯಾಗಿ ಕಾರ್ಯ ನಿರ್ವಹಿಸುವ ಮೂಲಕ ಅವಳಿ ನಗರದ ಜನತೆಗೆ ನಿಯಮಿತವಾಗಿ ನೀರು ಒದಗಿಸಲು ಶ್ರಮಿಸುವಂತೆ ಸೂಚಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳೊಂದಿಗೆ ಗದಗ–ಬೆಟಗೇರಿ ನಗರಸಭೆಯ ಇಂಜಿನಿಯರ್ ಹುಚ್ಚೇಶ್ವರ್ ಬಂಡಿವಡ್ಡರ ಹಾಗೂ ಅಧಿಕಾರಿಗಳು ಹಾಜರಿದ್ದು, ನೀರು ಸಮರ್ಪಕ ಒದಗಿಸಲು ಇರುವ ಅವಕಾಶಗಳ ಕುರಿತು ವಿವರಿಸಿದರು.

### ಕಡಲೆ ಬೆಳೆ ಖರೀದಿ ಬಾಕಿ ಹಣ ಬಿಡುಗಡೆಗೆ ಒತ್ತಾಯಿಸಿ ನಡೆಯುತ್ತಿರುವ ಧರಣಿ

# ನಾಳೆ ಜಿಪಂ ಕಚೇರಿಗೆ ಬೀಗ!

■ವಿಜಯಸಾಕ್ಷಿ ಸುದ್ದಿ, ಗದಗ

ಕಡಲೆ ಬೆಳೆ ಖರೀದಿಸಿ ಬಾಕಿ ಹಣ ಬಿಡುಗಡೆಗೆ ಒತ್ತಾಯಿಸಿ 6 ದಿನಗಳಿಂದ ಧರಣಿ ನಡೆಸಿದರೂ ಜಿಲ್ಲಾಡಳಿತ ಮತ್ತು ಸಚಿವರಿಂದ ಯಾವುದೇ ಸ್ಪಂದನೆ ಸಿಕ್ಕಿಲ್ಲ. ಹೀಗಾಗಿ ಜ. 13ರಂದು ಜಿಲ್ಲಾ ಪಂಚಾಯಿತಿ ಕಚೇರಿಗೆ ಬೀಗ ಹಾಕಿ ಪ್ರತಿಭಟನೆಗೆ ನಿರ್ಧರಿಸಿದ್ದೇವೆ ಎಂದು

ಅಖಿಲ ಕರ್ನಾಟಕ ಭ್ರಷ್ಟಾಚಾರ ನಿರ್ಮೂಲನ ರೈತ ಸಂಘ ಹಾಗೂ ಹಸಿರು ಸೇನೆ ರಾಜ್ಯಾಧ್ಯಕ್ಷ ಡಿ.ಎಚ್. ನವಲಗುಂದ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲಾ ಪಂಚಾಯಿತಿ ಅಧೀನದ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಸಂವರ್ಧನ ಸಂಸ್ಥೆ (ಎನ್‌ಆರ್‌ಎಲ್‌ಎಂ) ಗದಗ ಒಕ್ಕೂಟದಡಿ ಕೃಷಿ ಸಖಿ ಎಂದು ನೇಮಿಸಿದೆ. ಇದರಡಿ ಬರುವ ಮಹಿಳಾ ಸ್ವಸಹಾಯ




ಸಂಘಗಳ ಮೂಲಕ ಎನ್‌ಆರ್‌ಎಲ್‌ಎಂ ಖರೀದಿ ಮಾಡಿದೆ. ಆದರೆ 6.50 ಕೋಟಿ ರೂ. ಬಾಕಿ ಉಳಿಸಿಕೊಂಡಿದೆ. ಈ ಬಾಕಿ ಹಣಕ್ಕಾಗಿ ರೈತರು ಪ್ರತಿಭಟನೆ ಹಾದಿ ಹಿಡಿದ್ದಾರೆ. ರೈತ ಮಹಿಳೆಯರು ವಿಷ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ್ದಾರೆ. ಆದರೂ ನಮ್ಮ ಸಮಸ್ಯೆಗೆ ಯಾರೂ ಸ್ಪಂದಿಸಿಲ್ಲ. ಜ. 12ರ ಒಳಗಾಗಿ ಸಚಿವರು ನಮ್ಮ ಮನವಿಗೆ ಸ್ಪಂದಿಸದಿದ್ದರೆ 13ರಂದು ಜಿಪಂ ಕಚೇರಿಗೆ ಬೀಗ ಹಾಕಿ ಪ್ರತಿಭಟನೆ ನಡೆಸುತ್ತೇವೆ ಎಂದು ಎಚ್ಚರಿಸಿದರು.

ರೈತ ಸಂಘದ ಮಹಿಳಾ ಘಟಕದ ರಾಜ್ಯಾಧ್ಯಕ್ಷೆ ಮಹಾದೇವಿ ಹುಯಿಲಗೋಳ ಮಾತನಾಡಿ, ಜಿಲ್ಲಾಡಳಿತ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರ ಸ್ಪಂದನೆ ಸಿಗದಿರುವುದು ಬೇಸರದ ಸಂಗತಿ. ಎರಡನೇ ಹಂತದ ಹೋರಾಟದ ಬಳಿಕ ಸಾರ್ವಜನಿಕರಿಂದ ಭಿಕ್ಷೆ ಎತ್ತಿಯಾದರೂ ನಾವು ಜಿಲ್ಲಾಡಳಿತಕ್ಕೆ ಕೊಡುತ್ತೇವೆ ಎಂದು ಕುಟುಕಿದರು.

ಪತ್ರಿಕಾಗೋಷ್ಠಿಯಲ್ಲಿ ರೈತ ಮುಖಂಡ ಬೀರಪ್ಪ ದೇಸನೂರ , ಬಸನಗೌಡ ಪಾಟೀಲ, ಬಸವರಾಜ ಮೊಕಾಶಿ, ಗೀತಾ ಬಾಲಪ್ಪನವರ, ಹಾಸನದ ದಯಾನಂದ, ಶೈನಾಜ್ ನದಾಫ್, ಶಿವಲೀಲಾ ಭರದ್ವಾಡ, ಬಸವರಾಜ ಬಾರಿಗಿಡದ, ಈರಣ್ಣ ಅಂಗಡಿ, ಸಂಜೀವಕುಮಾರ ತಿಲಗರ, ಮಹಾಂತೇಶ ಗೌರಿ ಸೇರಿದಂತೆ ಅನೇಕರಿದ್ದರು.

## ಟಿಎಂಸಿ ಪಕ್ಷಕ್ಕೆ ಸೇರ್ಪಡೆಯಾದ ಕೇರಳ ಶಾಸಕ ಪಿ.ವಿ ಅನ್ವರ್

■ ವಿಜಯಸಾಕ್ಷಿ ಸುದ್ದಿ, ಕೇರಳ

ಕೇರಳದ ನಿಲಂಬೂರಿನ ಸ್ವತಂತ್ರ ಶಾಸಕ ಪಿ.ವಿ. ಅನ್ವರ್ ಅವರು ಕಮ್ಯುನಿಸ್ಟ್ ಪಾರ್ಟಿ ಆಫ್ ಇಂಡಿಯಾ (ಮಾರ್ಕಿಸ್ಟ್ ) ನೇತೃತ್ವದ ಎಡ ಪ್ರಜಾಸತ್ತಾತ್ಮಕ ರಂಗ (ಎಲ್‌ಡಿಎಫ್) ತೊರೆದು ಜನವರಿ 10 ರಂದು ಶುಕ್ರವಾರ ಅಧಿಕೃತವಾಗಿ ತೃಣಮೂಲ ಕಾಂಗ್ರೆಸ್ (ಟಿಎಂಸಿ) ಸೇರ್ಪಡೆಯಾಗಿದ್ದಾರೆ.

ಟಿಎಂಸಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಅಭಿಷೇಕ್ ಬ್ಯಾನರ್ಜಿ ಅವರು ಸದಸ್ಯತ್ವ ನೀಡುವ ಮೂಲಕ ಅನ್ವರ್ ಅವರನ್ನು ಪಕ್ಷಕ್ಕೆ ಸ್ವಾಗತಿಸಿದ್ದಾರೆ.

ಟಿಎಂಸಿ ಎಕ್ಸ್ ಪೋಸ್ಟ್ ಮೂಲಕ ಅನ್ವರ್ ಅವರು ಪಕ್ಷ ಸೇರ್ಪಡೆಯಾಗಿರುವುದನ್ನು ದೃಢಪಡಿಸಿದೆ. ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಹಾಗೂ ಟಿಎಂಸಿ ಮುಖ್ಯಸ್ಥೆ ಮಮತಾ ಬ್ಯಾನರ್ಜಿ ಕೂಡ ಅನ್ವರ್ ಅವರನ್ನು ಪಕ್ಷಕ್ಕೆ ಸ್ವಾಗತಿಸುವ ಸಂದೇಶ ಹಂಚಿಕೊಂಡಿದ್ದಾರೆ. "ಕೇರಳದ ನಿಲಂಬೂರಿನ ಗೌರವಾನ್ವಿತ ಶಾಸಕರಾದ ಶ್ರೀ ಪಿ.ವಿ. ಅನ್ವರ್ ಅವರು ಎಐಟಿಸಿ ಕುಟುಂಬಕ್ಕೆ ಸೇರ್ಪಡೆಗೊಂಡಿದ್ದು, ಅವರಿಗೆ ಆತ್ಮೀಯ ಸ್ವಾಗತ. ಸಾರ್ವಜನಿಕ ಸೇವೆಗೆ ಅವರ ಸಮರ್ಪಣೆ ಮತ್ತು ಕೇರಳದ ಜನರ ಹಕ್ಕುಗಳಿಗಾಗಿ ಅವರ ವಕಾಲತ್ತು ನಮ್ಮ ಸಮಗ್ರ ಬೆಳವಣಿಗೆಯ ಧ್ಯೇಯವನ್ನು ಶ್ರೀಮಂತಗೊಳಿಸುತ್ತದೆ. ಒಟ್ಟಾಗಿ, ಪ್ರತಿಯೊಂದು ಧ್ವನಿಯೂ ಮುಖ್ಯವಾಗುವ ಮತ್ತು ಪ್ರತಿಯೊಂದು ಕನಸು ನನಸಾಗುವ ಪ್ರಗತಿಪರ ಭಾರತಕ್ಕಾಗಿ ನಾವು ಶ್ರಮಿಸುತ್ತೇವೆ!" ಎಂದು ಮಮತಾ ಬ್ಯಾನರ್ಜಿ ಎಕ್ಸ್‌ನಲ್ಲಿ ಪೋಸ್ಟ್ ಹಾಕಿದ್ದಾರೆ. ಎಲ್‌ಡಿಎಫ್ ಜೊತೆಗಿನ ಭಿನ್ನಾಭಿಪ್ರಾಯದ ಮೂರು ತಿಂಗಳ ನಂತರ ಅನ್ವರ್ ಅವರು ಟಿಎಂಸಿ ಸೇರ್ಪಡೆಯಾಗಿದ್ದಾರೆ. ನಿಲಂಬೂರಿನ ವಿಭಾಗೀಯ ಅರಣ್ಯ ಕಚೇರಿ (ಉತ್ತರ) ಮೇಲೆ ದಾಳಿ ಮಾಡಿದ್ದಕ್ಕಾಗಿ ಡಿಸೆಂಬರ್ 5ರಂದು ಅನ್ವರ್ ಅವರನ್ನು ಬಂಧಿಸಲಾಗಿತ್ತು. ಡಿಸೆಂಬರ್ 6 ರಂದು ಮರುದಿನ ಜಾಮೀನಿನ ಮೇಲೆ ಬಿಡುಗಡೆಯಾದ ಅವರು, ಎಲ್‌ಡಿಎಫ್ ವಿರುದ್ಧ ಕಾಂಗ್ರೆಸ್ ನೇತೃತ್ವದ ಯುನೈಟೆಡ್ ಡೆಮಾಕ್ರಟಿಕ್ ಫ್ರಂಟ್ (ಯುಡಿಎಫ್) ನೊಂದಿಗೆ ಸಹಕರಿಸಲು ಸಿದ್ಧರಿರುವುದಾಗಿ ಹೇಳಿದ್ದರು. ಅನ್ವರ್ ಅವರು ಎಂಟು ವರ್ಷಗಳಿಗೂ ಹೆಚ್ಚು ಕಾಲ ಎಲ್‌ಡಿಎಫ್ ಜೊತೆಗಿದ್ದರು. ಅನ್ವರ್ 2016ರಲ್ಲಿ ಎಲ್‌ಡಿಎಫ್ ಬೆಂಬಲಿತ ಸ್ವತಂತ್ರ ಅಭ್ಯರ್ಥಿಯಾಗಿ ಚುನಾವಣೆಗೆ ಸ್ಪರ್ಧಿಸಿ ಶಾಸಕರಾದರು. ಭೂ ಅತಿಕ್ರಮಣ ಮತ್ತು ಅಕ್ರಮ ನಿರ್ಮಾಣಗಳಿಗೆ ಸಂಬಂಧಿಸಿದ ವಿವಾದಗಳ ಹೊರತಾಗಿಯೂ, ಸಿಪಿಐ(ಎಂ) ಅವರನ್ನು 2021ರಲ್ಲಿ ಮತ್ತೆ ಕಣಕ್ಕಿಳಿಸಿತ್ತು ಮತ್ತು ಅವರು ಮರು ಆಯ್ಕೆಯಾಗಿದ್ದರು.

ಲಿಂಗಾಯತ ಪ್ರಗತಿಶೀಲ ಸಂಘದ 2727ನೇ ಶಿವಾನುಭವದಲ್ಲಿ ಶಾಂತಲಿಂಗ ಶ್ರೀಗಳು

# ಅಕ್ಷರದ ಅವ್ವ ಸಾವಿತ್ರಿಬಾಯಿ ಫುಲೆ

■ ವಿಜಯಸಾಕ್ಷಿ ಸುದ್ದಿ, ಗದಗ

ಭಾರತದ ಮೊದಲ ಮಹಿಳಾ ಶಿಕ್ಷಕಿಯಾದ ಅಕ್ಷರದವ್ವ ಸಾವಿತ್ರಿಬಾಯಿ ಫುಲೆಯವರ ಸಾಮಾಜಿಕ ಚಿಂತನೆ ಅನುಪಮವಾದುದು. ತ್ರಿವಿಧ ದಾಸೋಹಿ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳು ಆಗಾಗ ದುಡ್ಡೇ ದೊಡ್ಡಪ್ಪ, ವಿದ್ಯೆ ಅದರಪ್ಪ ಎಂದು ಹೇಳುತ್ತಿದ್ದರು. ದುಡ್ಡು ಬಂದು ಹೋಗುವುದು, ವಿದ್ಯೆ ಬಂದು ಹೋಗುವುದಲ್ಲ ಎಂಬ ಸ್ಪಷ್ಟ ಸಂದೇಶವನ್ನು ಸಮಾಜಕ್ಕೆ ತಿಳಿಸಿ ಮೊದಲು ಬಯಲಿನಲ್ಲೆ ಶಾಲೆಯನ್ನು ತೆರೆದು ಬೋಧನೆ ಮಾಡುತ್ತಾರೆ. ನಂತರ ಫಾತಿಮಾ ಶೇಖ್ ಅವರು ತಮ್ಮ ಮನೆಯ ಕಟ್ಟಡವನ್ನು ಶಾಲೆಗಾಗಿ ಬಿಟ್ಟು ಕೊಡುತ್ತಾರೆ. ಅನೇಕ ಹೆಣ್ಣುಮಕ್ಕಳಿಗೆ ಶಿಕ್ಷಣವನ್ನು ಕೊಡುವ ವ್ಯವಸ್ಥೆ ಮಾಡುವರು. ಅಂದಿನಿಂದ ಮೊದಲ ಅಕ್ಷರದ ಅವ್ವ ಸಾವಿತ್ರಿಬಾಯಿ ಫುಲೆ ಆಗುತ್ತಾರೆ ಎಂದು ಭೈರನಟ್ಟಿ ಶಿರೋಳದ ಶ್ರೀ ಮ.ನಿ.ಪ್ರ. ಶಾಂತಲಿಂಗ ಮಹಾಸ್ವಾಮಿಗಳು ನುಡಿದರು.

ಅವರು ಲಿಂಗಾಯತ ಪ್ರಗತಿಶೀಲ ಸಂಘದ 2727ನೇ ಶಿವಾನುಭವದ ಸಮ್ಮುಖ ವಹಿಸಿ ಆಶೀರ್ವಚನ ನೀಡಿದರು.

ಸಾವಿತ್ರಿಬಾಯಿ ಫುಲೆಯವರು ಸಾಮಾಜಿಕ ನ್ಯಾಯ ಸಿಗಬೇಕಾದರೆ ಅದಕ್ಕೆ ದಿವ್ಯೌಷಧ ಶಿಕ್ಷಣವೆಂದರಿತು ವಿಶೇಷವಾಗಿ ಹೆಣ್ಣುಮಕ್ಕಳಿಗೆ ಶಾಲೆಯನ್ನು ತೆರೆದಿದ್ದು ಅಂದಿನ ಸಾಮಾಜಿಕ ವ್ಯವಸ್ಥೆಯಲ್ಲಿ ಬಹುದೊಡ್ಡ ಬದಲಾವಣೆಗೆ ಕಾರಣವಾಯಿತು. ಧಾರ್ಮಿಕ, ಆಧ್ಯಾತ್ಮಿಕ ಅಭಿರುಚಿಯುಳ್ಳವರಾಗಿದ್ದ ಸಾವಿತ್ರಿಬಾಯಿ ಫುಲೆಯವರು, ಬಡವರಿಗೆ, ಕೆಳಸ್ತರದ ಜನರಿಗೆ ವಿದ್ಯೆ ಕೊಡುವುದನ್ನು ಒಂದು ವ್ರತವೆಂದು ಬಗೆದು ಅಚಲ ಶ್ರದ್ಧೆಯನ್ನಿಟ್ಟುಕೊಂಡು, ದಣಿವರಿಯದೇ ಸಾಮಾಜಿಕ ನ್ಯಾಯಕ್ಕಾಗಿ ತಮ್ಮ ಜೀವನವನ್ನು ಮುಡುಪಾಗಿಟ್ಟರು ಎಂದರು.



ಗದುಗಿನ 3 ವಿದ್ಯಾರ್ಥಿಗಳು ಸಿ.ಎ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿದ್ದು ಹೆಮ್ಮೆಯ ವಿಷಯ. ಅದಕ್ಕೆ ಮಾರ್ಗದರ್ಶನ ಮಾಡಿದ ಕೆ.ಎಸ್. ಚಟ್ಟಿಯವರು ಅಭಿನಂದನಾರ್ಹರು. ಪ್ರತಿಭೆಗೆ ಪುರಸ್ಕಾರ ಇರುತ್ತದೆ ಎನ್ನುವುದಕ್ಕೆ ಈ ವೇದಿಕೆಯೇ ಇಂದು ಹೆಣ್ಣುಮಕ್ಕಳು ಶಾಲೆ ಕಲಿತು ತುಂಬಾ ಮಹತ್ವದ ಸಿ.ಎ ಪರೀಕ್ಷೆಯನ್ನು ಪಾಸಾಗುವಂತೆ ಆಗಿದೆ ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಸಿ.ಎ ಕೆ.ಎಸ್. ಚಟ್ಟಿಯವರು ಸಿ.ಎ ಕುರಿತು ಸಂಪೂರ್ಣ ಮಾಹಿತಿಯನ್ನು ನೀಡಿದರು. ಅತಿಥಿಗಳಾಗಿ ಮುಕುಂದ ಪೊತ್ನೀಸ್ ಮತ್ತು ಸಿಎ ಆನಂದ ಪೋತ್ನಿಸ ಹಾಗೂ ದಾಸೋಹ ಸೇವೆ ವಹಿಸಿಕೊಂಡ ಶಿವಣ್ಣ ಯರಾಶಿ ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಮರ್ಚಂಟ್ ಅರ್ಬನ್ ಬ್ಯಾಂಕ್ ಗದಗ ಅಧ್ಯಕ್ಷರಾಗಿ ಆಯ್ಕೆಯಾದ ಕೆ.ಎಸ್. ಚಟ್ಟಿಯವರನ್ನು ಹಾಗೂ ಉಪಾಧ್ಯಕ್ಷರಾದ ಚಂದ್ರು ಬಾಳಿಹಳ್ಳಿಮಠ ಅವರನ್ನು ಸನ್ಮಾನಿಸಲಾಯಿತು. ಸಿಎ ಪರೀಕ್ಷೆಯಲ್ಲಿ ತೇರ್ಗಡೆಯಾದ ಶ್ರೀರಂಜಿನಿ ಕುಲಕರ್ಣಿ, ವಿಜೇತಾ ಹುಣಶೀಮರದ, ಈರಣ್ಣ ಸೂಡಿ ಇವರನ್ನು ಸನ್ಮಾನಿಸಲಾಯಿತು.

ಶ್ರೀ ಮೃತ್ಯುಂಜಯ ಹಿರೇಮಠ ಹಾಗೂ ಗುರುನಾಥ್ ಸುತಾರ ಇವರು ಸಂಗೀತ ಸೇವೆ ನೇರವೇರಿಸಿದರು. ಧರ್ಮ ಗ್ರಂಥ ಪಠಣವನ್ನು ಅಂಜನೇಯ ಮೇಟಿ ಮಾಡಿದರೆ, ವಚನ ಚಿಂತನವನ್ನು ಕಾರ್ತಿಕ ಹಿರೇಮಠ ನಡೆಸಿಕೊಟ್ಟರು.

ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ್ರ, ಉಪಾಧ್ಯಕ್ಷ ಡಾ. ಉಮೇಶ್ ಪುರದ, ವಿದ್ಯಾ ಗಂಜಿಹಾಳ, ಕಾರ್ಯದರ್ಶಿ ವೀರಣ್ಣ ಗೋಟಡಕಿ, ಸಹಕಾರ್ಯದರ್ಶಿ ಸೋಮನಾಥ ಪುರಾಣಿಕ, ನಾಗರಾಜ್ ಹಿರೇಮಠ, ಸಂಘಟನಾ ಕಾರ್ಯದರ್ಶಿ ಮಹೇಶ್ ಗಾಣಿಗೇರ ಕೋಶಾಧ್ಯಕ್ಷ ಬಸವರಾಜ ಕಾಡಪ್ಪನವರ, ಸಹಚೇರ್ಮನ್‌ರಾದ ಶಿವಾನಂದ ಹೊಂಬಳ ಹಾಗೂ ಭಕ್ತಾದಿಗಳು ಉಪಸ್ಥಿತರಿದ್ದರು.

ಶಿವಾನುಭವ ಸಮಿತಿಯ ಚೇರ್ಮನ್‌ರಾದ ಐ.ಬಿ. ಬೆನಕೊಪ್ಪ ಪರಿಚಯಿಸಿದರೆ, ಅಧ್ಯಕ್ಷರಾದ ಬಾಲಚಂದ್ರ ಭರಮಗೌಡ್ರ ಸ್ವಾಗತಿಸಿದರು. ವಿದ್ಯಾ ಪ್ರಭು ಗಂಜಿಹಾಳ ಕಾರ್ಯಕ್ರಮ ನಿರೂಪಿಸಿದರು.

ಉಪನ್ಯಾಸಕರಾಗಿ ಆಗಮಿಸಿದ ಗದುಗಿನ ಕ್ಷೇತ್ರ ಸಂಪನ್ಮೂಲ ಕೇಂದ್ರದ ವಿಶೇಷ ಅಗತ್ಯವುಳ್ಳ ಮಕ್ಕಳ ಸಂಪನ್ಮೂಲ ವ್ಯಕ್ತಿಗಳಾದ ಕವಿತಾ ಬಸವರಾಜ ದಂಡಿನರವರು, ಭಾರತದ ಶ್ರೇಷ್ಠ ಮೊದಲ ಶಿಕ್ಷಕಿ ಸಾವಿತ್ರಿಬಾಯಿ ಫುಲೆಯವರು ಹೆಣ್ಣು ಮಕ್ಕಳು ಮನೆಯಲ್ಲಿಯೇ ಇದ್ದು ಹಾಡುಪಾಡು ಹೇಳಿಕೊಂಡು ವ್ರತಾಚಾರಣೆ ಮಾಡಿ ಪುರಾಣ ಕಥೆಗಳನ್ನು ಕೇಳುವುದು ಬಿಟ್ಟು, ಶಾಲೆ ಕಲಿಸಿ ವಿಚಾರದ ಕಿಡಿ ಹೊತ್ತಿಸಿದರು. ಅನೇಕರು ತುಂಬಾ ಕೀಟಲೆ ಮಾಡಿದರು. ಕಲ್ಲು ಎಸೆದರು. ಸೆಗಣಿ ಎರಚಿದರು. ಅವ್ಯಾಚ್ಯವಾಗಿ ಬೈದರು. ಯಾವುದಕ್ಕೂ ಬಗ್ಗದೆ ಶಿಕ್ಷಣದ ಮೂಲಕ ಕ್ರಾಂತಿ ಮಾಡುತ್ತಾ ಹೋದರು. ಅದರ ಪ್ರತಿಫಲವೇ ಇಂದು ಎಲ್ಲಾ ರಂಗಗಳಲ್ಲಿ ಹೆಣ್ಣುಮಕ್ಕಳು ಸಾಧನೆ ಮಾಡುತ್ತಾ ಸಾಹಸದ ಕಥೆಯಾಗಿದ್ದಾರೆ ಎಂದರು.

## 'ಮಾಡಿದಷ್ಟು ನೀಡು ಭಿಕ್ಷೆ' ಧ್ವನಿ ಸುರುಳಿ ಪೋಸ್ಟರ್ ಬಿಡುಗಡೆ




■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಶ್ರೀ ನಾಯಕನಹಟ್ಟಿ ತಿಪ್ಪೇರುದ್ರಸ್ವಾಮಿಯ ಕುರಿತಾದ 'ಮಾಡಿದಷ್ಟು ನೀಡು ಭಿಕ್ಷೆ' ಎನ್ನುವ ಧ್ವನಿ ಸುರುಳಿಯ ಪೋಸ್ಟರ್ ಬಿಡುಗಡೆ ಮಾಡಲಾಯಿತು.

ಎಂ.ಸಿ. ಬಸವರಾಜ್ ಭಕ್ತಿ ಪೂರ್ವಕವಾದ ಅಭಿನಯದ ಈ ಗೀತೆಗೆ ಮಂಜು ಕವಿ ಸಂಗೀತ ಒದಗಿಸಿ ಸಾಹಿತ್ಯ ಬರೆದು ನಿರ್ದೇಶನ ಮಾಡಲಿದ್ದಾರೆ. ಸಂಕಲನ ವೆಂಕಿ ಯುಡಿಐ, ವಾದ್ಯ ಸಂಯೋಜನೆ, ಸಂಗೀತ ನಿರ್ದೇಶಕ ವಿನು ಮನಸು, ಕವಿ ರಾಜೇಶ್ ರವರು ಅಭಿನಂದನೆ ಸಲ್ಲಿಸಿ ತಂಡಕ್ಕೆ ಶುಭ ಹಾರೈಸಿದರು. ಡಾ.ಪ್ರಭು ಗಂಜಿಹಾಳ, ಡಾ.ವೀರೇಶ ಹಂಡಿಗಿ ಅವರ ಪತ್ರಿಕಾ ಸಂಪರ್ಕ, ದೇವು ಅವರ ಪ್ರಚಾರ ಕಲೆಯಿದೆ. ಮಲೆ ಮಹದೇಶ್ವರ ಸ್ವಾಮಿಯ ದೇವಸ್ಥಾನದ ಅರ್ಚಕರಾದ ದಿನೇಶ್ ಕುಮಾರ್ ಉಪಸ್ಥಿತರಿದ್ದರು.

# ದ್ವಿತೀಯ ಪಿಯು ವಿದ್ಯಾರ್ಥಿಗಳ ಬೀಳ್ಕೊಡುಗೆ

■ ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಆದಿಯೋಗಿ ಎಜುಕೇಶನಲ್ ಟ್ರಸ್ಟ್‌ನ ಇನ್‌ಸೈಟ್ ಅಕಾಡೆಮಿ ಸಾರಥ್ಯದಲ್ಲಿ ಮುನ್ನಡೆಯುತ್ತಿರುವ ಮೈಲಾರಪ್ಪ ಮೆಣಸಗಿ ಪ.ಪೂ ಮಹಾವಿದ್ಯಾಲಯದಲ್ಲಿ ದ್ವಿತೀಯ ಪಿಯು ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಸಮಾರಂಭ ನೆರವೇರಿತು.

ನಿವೃತ್ತ ಪ್ರಾಂಶುಪಾಲರಾದ ಉಮೇಶ್ ಹಿರೇಮಠ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಮುಖ್ಯ ಅತಿಥಿಗಳಾಗಿ ಆಗಮಿಸಿದ ಸ್ಥಳೀಯ ಸಂಪನ್ಮೂಲ ವ್ಯಕ್ತಿ ಪ್ರಕಾಶ್ ಮಂಗಳೂರು ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನದ ಬಗ್ಗೆ ಮಾತನಾಡಿದರು. ಖಿಲುಗಿಲೂ



ಸೆನೆಟ್ ಚುನಾವಣೆಯಲ್ಲಿ ಅಧಿಕ ಮತಗಳಿಸಿ ಗೆಲುವು ಸಾಧಿಸಿದ್ದಕ್ಕಾಗಿ ಡಾ. ವಿರೇಶ ಹಂಚಿನಾಳರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಟ್ಯಾಲೆಂಟ್ ಹಂಟ್ ಸ್ಕಾಲರ್‌ಶಿಪ್ ಪರೀಕ್ಷೆಯಲ್ಲಿ ಸಾಧನೆಗೈದ ವಿದ್ಯಾರ್ಥಿಗಳಿಗೆ ನಗದು ಬಹುಮಾನವನ್ನು ವಿತರಿಸಲಾಯಿತು. ಎಂ.ಎಂ.ಎಂ ಟ್ರಸ್ಟ್‌ನ ಕಾರ್ಯಾಧ್ಯಕ್ಷ ಡಾ. ಜಯದೇವ ಮೆಣಸಗಿ ದ್ವಿತೀಯ ಪಿಯುಸಿಯಲ್ಲಿ ಜಿಲ್ಲೆಗೆ ದ್ವಿತೀಯ ಸ್ಥಾನ ಗಳಿಸಿದ ಕಾಲೇಜಿನ ಲಿಂಗಮ್ಮ ರಶ್ಮಿ ಸಜ್ಜನ್‌ರವರಿಗೆ ಟ್ರಸ್ಟ್‌ನ ವತಿಯಿಂದ ನಗದು ಬಹುಮಾನವನ್ನು ನೀಡಿ ಅಭಿನಂದಿಸಿದರು.

ಪ್ರಾಚಾರ್ಯ ಶರತ್ ಕುಮಾರ್ ಅಧ್ಯಕ್ಷತೆ ವಹಿಸಿದ್ದರು. ಇನ್‌ಸೈಟ್ ಅಕಾಡೆಮಿಯ ಸದಸ್ಯರಾದ ಎಸ್.ಜಿ. ಪಾಟಿಲ್, ಕುಮಾರ್ ರಾಥೋಡ್, ಪವನಕುಮಾರ್ ಶೇಠ್, ಸುನಿಲ್ ಯತ್ತಿನಮನೆ, ಪರಶುರಾಮ ಗುಡಿಮನಿ ಉಪಸ್ಥಿತರಿದ್ದರು. ವಾಸಿಮ್ ದೊಡ್ಡಮನಿ ಕಾರ್ಯಕ್ರಮ ನಿರೂಪಿಸಿದರು.

# ಚಿತ್ರಕಲಾ ಸ್ಪರ್ಧೆಯ ವಿಜೇತರಿಗೆ ಬಹುಮಾನ ವಿತರಣೆ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಗ್ರಾಮ ಪಂಚಾಯಿತಿ ಹಾಗೂ ಲಕ್ಕುಂಡಿಯ ಕಲಾತ್ಮಕ ಕಲಾವಿದರ ಬಳಗ ಇವರ ಸಹಯೋಗದಲ್ಲಿ ಬಾಪೂಜಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಗ್ರಾ.ಪಂ ಮಟ್ಟದ ಚಿತ್ರಕಲೆ ಸ್ಪರ್ಧಾ ವಿಜೇತರಿಗೆ ಬಹುಮಾನ ವಿತರಿಸಲಾಯಿತು.



ಪ್ರಾಥಮಿಕ ಹಾಗೂ ಪ್ರೌಢಶಾಲಾ ಮಕ್ಕಳಿಗೆ ಏರ್ಪಡಿಸಿದ್ದ ಚಿತ್ರಕಲೆ ಸ್ಪರ್ಧೆಯಲ್ಲಿ 2ರಿಂದ 4ನೇ ತರಗತಿ ವಿಭಾಗದಲ್ಲಿ ಬಾಪೂಜಿ ಕಿರಿಯ ಪ್ರಾಥಮಿಕ ಶಾಲೆಯ ಮಧು ಪೂಜಾರ ಪ್ರಥಮ, ಸರಕಾರಿ ಉರ್ದು ಪ್ರಾಥಮಿಕ ಶಾಲೆಯ ಫಲಕನಾಜ ದ್ವಿತೀಯ, ಬಂದಾನವಾಜ ಬರದ್ವಾಡ ತೃತೀಯ, 5ರಿಂದ 7ನೇ ತರಗತಿ ವಿಭಾಗದಲ್ಲಿ ಎಸ್‌ಎಸ್‌ವಿಕೆ ಶಾಲೆಯ ಗೀತಾ ಅರಹುಣಸಿ ಪ್ರಥಮ, ಉರ್ದು ಶಾಲೆಯ ಇಸ್ಮಾಯಿಲ್ ಕದಡಿ ದ್ವಿತೀಯ, ಶಶಾಂಕ ಸಿದ್ದರಾಮಶಟ್ಟಿ ತೃತೀಯ, 8ರಿಂದ 10ನೇ ತರಗತಿ ವಿಭಾಗದಲ್ಲಿ ಕಿತ್ತೂರ ರಾಣಿ ಚನ್ನಮ್ಮ ವಸತಿ ಶಾಲೆಯ ಭೂಮಿಕಾ ಲಮಾಣಿ ಪ್ರಥಮ, ಸೌಮ್ಯ ಮಾದರ ದ್ವಿತೀಯ, ಜಿಜಿಹೆಚ್ ಶಾಲೆಯ ಹೇಮಲತಾ ಕುಲಕರ್ಣಿ ತೃತೀಯ ಸ್ಥಾನ ಪಡೆದರು.

ಸ್ಪರ್ಧಾ ವಿಜೇತರಿಗೆ ಹಾಗೂ ಭಾಗವಹಿಸಿದ ಎಲ್ಲಾ ಮಕ್ಕಳಿಗೂ ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ, ಉಪಾಧ್ಯಕ್ಷೆ ಪುಷ್ಪಾ ಪಾಟೀಲ ಪ್ರಶಸ್ತಿಪತ್ರ ಹಾಗೂ ಬಹುಮಾನಗಳನ್ನು ವಿತರಿಸಿ ಅಭಿನಂದಿಸಿದರು. ಈ ಸಂದರ್ಭದಲ್ಲಿ ಗ್ರಾ.ಪಂ ಸದಸ್ಯರಾದ ರಜಿಯಾಬೇಗಂ ತಹಸೀಲ್ದಾರ, ಆಮೀನಾ ಹುಬ್ಬಳ್ಳಿ, ಸಾಹಿತಿ ನೀಲಕಂಠ ಮುಕ್ಕಣ್ಣವರ, ಆರ್.ಬಿ. ಬರದ್ವಾಡ, ಲಕ್ಕುಂಡಿಯ ಕಲಾತ್ಮಕ ಕಲಾವಿದ ಬಳಗದವರು ಹಾಜರಿದ್ದರು.

ನಿರ್ಣಾಯಕರಾಗಿ ವಿಜಯ ಕಲಾ ಮಂದಿರದ ಪ್ರಾಚಾರ್ಯ ಬಿ.ಎಲ್. ಚವ್ಹಾಣ, ಪಿ.ಬಿ. ಬಂಡಿ, ಎಸ್.ವಿ. ಗುಂಜಳ, ಬಸವರಾಜ ನೆಲಜೇರಿ, ನಂದಾ ಪತ್ತಾರ, ಸುಮಲತಾ ಕವಲೂರ ಕಾರ್ಯ ನಿರ್ವಹಿಸಿದರು.

ರಮೇಶ ಹಾದಿಮನಿ ಸ್ವಾಗತಿಸಿದರು. ಬಸವರಾಜ ಗರ್ಜಪ್ಪನವರ, ರಫಿಯಾ ದಂಡಿನ ನಿರೂಪಿಸಿದರು, ಎಸ್.ವಿ. ಗರ್ಜಪ್ಪನವರ ವಂದಿಸಿದರು.



ಲಕ್ಷ್ಮೇಶ್ವರ ಪುರಸಭೆಯಿಂದ ವಿನಾಯಕ ನಗರ ಮಹೇಶ ಸೋಮಕ್ಕನವರ ಮನೆಯ ರಸ್ತೆಯ ಬದಿ ಕಾಂಕ್ರೀಟ್ ಚರಂಡಿ ನಿರ್ಮಾಣ ಕಾಮಗಾರಿಗೆ ಸದಸ್ಯೆ ವಾಣಿ ನೀಲಪ್ಪ ಹತ್ತಿ ಚಾಲನೆ ನೀಡಿದರು. ಈ ವೇಳೆ ಸದಸ್ಯರಾದ ಪ್ರವೀಣ ಬಾಳಿಕಾಯಿ, ಮಾಜಿ ಸದಸ್ಯರಾದ ಮಹೇಶ ಸೋಮಕ್ಕನವರ, ನೀಲಪ್ಪ ಹತ್ತಿ, ವಿರೇಶ ಸಾಸಲವಾಡ, ಡಾ. ಪಿ.ಡಿ. ತೋಟದ, ಪ್ರಕಾಶ ಶಿರಹಟ್ಟಿ, ರಮೇಶ ನವಲೆ, ವೈಶಾಖ ಬಿಂಕದಕಟ್ಟಿ ಮುಂತಾದವರಿದ್ದರು.

## ಜಿಗಳೂರ ಕೆರೆ ಪ್ರವಾಸಿ ತಾಣವಾಗಲಿದೆ

▶▶ ಮೊದಲನೇ ಪುಟದಿಂದ

2013 ಹಾಗೂ 18ರ ಅವಧಿಯಲ್ಲಿ ರೋಣ ಪಟ್ಟಣದಲ್ಲಿರುವ ಕೆರೆಯ ಸೌಂದರ್ಯ ಹೆಚ್ಚಿಸಲು 2 ಕೋಟಿ ರೂ. ಬಿಡುಗಡೆ ಮಾಡಲಾಗಿತ್ತು. ಅದರಲ್ಲಿ 1 ಕೋಟಿ 60 ಲಕ್ಷ ರೂಗಳನ್ನು ಖರ್ಚು ಮಾಡಿದ್ದರು. ನಂತರ ಅಬಿವೃದ್ಧಿ ಕಾರ್ಯ ಸ್ಥಗಿತಗೊಂಡಿತ್ತು. ಈಗ ಉಳಿದ 40 ಲಕ್ಷ ಅನುದಾನದ ಜೊತೆಗೆ ಮತ್ತೆ 50 ಲಕ್ಷ ರೂ ಅನುದಾನವನ್ನು ಒದಗಿಸಲಾಗಿದ್ದು, ಈ ಕಾರ್ಯ ಕೂಡ ಶೀಘ್ರವೇ ಮುಗಿಯಲಿದೆ. ರೋಣ ಹಾಗೂ ಜಿಗಳೂರ ಕೆರೆಗಳ ಸೌಂದರ್ಯವನ್ನು ಹೆಚ್ಚಿಸಿ ಪ್ರವಾಸಿ ತಾಣಗಳಾಗಿ ಮಾರ್ಪಡಿಸುವ ಗುರಿಯನ್ನು ಹೊಂದಿದೆ ಎಂದರು. ಈಗಾಗಲೇ ಪಟ್ಟಣದಲ್ಲಿ ಡಬಲ್ ಸಿಸಿ ರಸ್ತೆ, ಚರಂಡಿ ನಿರ್ಮಾಣ ಸೇರಿ ಇತರೆ ಕಾಮಗಾರಿಗಳಿಗೆ ಚಾಲನೆ ನಿಡಲಾಗಿದ್ದು, 13 ಕೋಟಿ ರೂ ವೆಚ್ಚದಲ್ಲಿ ಅಬ್ಬಿಗೇರಿ ರಸ್ತೆಯ ಮಲಪ್ರಭಾ ಬಲದಂಡೆಯಿಂದ ಮುದೇನಗುಡಿ ಕ್ರಾಸ್‌ವರೆಗೆ ಸಿಸಿ ರಸ್ತೆ ಮತ್ತು 7 ಕೋಟಿ ರೂಗಳ ವೆಚ್ಚದಲ್ಲಿ ಕುರಹಟ್ಟಿ ರಸ್ತೆ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿವೆ. ರೋಣ ಪಟ್ಟಣದ ಸಮಗ್ರ ಅಭಿವೃದ್ಧಿಗೆ 13 ಕೋಟಿ ರೂಗಳ ನೀಲ ನಕ್ಷೆಯನ್ನು ಸಿದ್ಧಪಡಿಸಿದ್ದು, ಇಷ್ಟರಲ್ಲೇ ಅನುದಾನ ಬಿಡಗಡೆಯಾಗಲಿದೆ ಎಂದರು.

ಉಪಾಧ್ಯಕ್ಷ ದುರ್ಗಪ್ಪ ಹಿರೇಮನಿ, ಸಂಗನಗೌಡ ಪಾಟೀಲ, ವಿ.ಆರ್. ಗುಡಿಸಾಗರ, ಬಸವರಾಜ ನವಲಗುಂದ, ಯೂಸುಫ್ ಇಟಗಿ, ಗದಿಗೆಪ್ಪ ಕಿರೇಸೂರ, ಬಾವಾಸಾಬ ಬೆಟಗೇರಿ, ನಾಜಬೇಗಂ ಯಲಿಗಾರ, ವಿದ್ಯಾ ದೊಡ್ಡಮನಿ, ರಮೇಶ ಹೊಸಮನಿ ಸೇರಿದಂತೆ ಸದಸ್ಯರು ಉಪಸ್ಥಿತರಿದ್ದರು.

## ನಿಧನ



**ಪಾರಮ್ಮ ಬಾವಿ**

ಡಂಬಳ:ಗ್ರಾಮದ ರೆಡ್ಡಿ ಸಮಾಜದ ಹಿರಿಯರಾದ ಪಾರಮ್ಮ ಶಂಕ್ರಪ್ಪ ಬಾವಿ (94) ಶನಿವಾರ ಬೆಳಿಗ್ಗೆ ನಿಧನರಾದರು. ಮೃತರಿಗೆ ಮೂವರು ಪುತ್ರರರು, ಇಬ್ಬರು ಪುತ್ರಿಯರು, ಸೊಸೆಯಂದಿರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು ಬಳಗವಿದೆ.

# ಪರೀಕ್ಷೆಗಳ ಭಯದಿಂದ ಹೊರಬನ್ನಿ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಪರೀಕ್ಷೆಗಳ ಭಯದಿಂದ ಹೊರಬರಲು ಪ್ರಮುಖವಾದ ಸೂತ್ರಗಳನ್ನು ತಿಳಿಯಪಡಿಸುವ ರಹದಾರಿಯೇ ಕಾರ್ಯಾಗಾರದ ಮೂಲ ಉದ್ದೇಶವಾಗಿದ್ದು, ವಿದ್ಯಾರ್ಥಿಗಳು ಸೂತ್ರಗಳನ್ನು ಅಳವಡಿಸಿಕೊಂಡು ಪರೀಕ್ಷೆಯನ್ನು ಎದುರಿಸಬೇಕು ಎಂದು ಸಂಪನ್ಮೂಲ ವ್ಯಕ್ತಿ, ಕೆ.ವಿ.ಎಸ್.ಆರ್ ಪದವಿಪೂರ್ವ ಕಾಲೇಜು ಉಪನ್ಯಾಸಕ ಎಸ್.ಎಚ್. ಮಲ್ಲಾಪೂರ ಹೇಳಿದರು.

ಸಮೀಪದ ಬಳಗಾನೂರ ಗ್ರಾಮದ ಚನ್ನವೀರ ಶರಣರ ಕಲಾ ಹಾಗೂ ವಾಣಿಜ್ಯ ಪದವಿಪೂರ್ವ ಮಹಾವಿದ್ಯಾಲಯದಲ್ಲಿ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗಾಗಿ ಕನ್ನಡ ವಿಷಯದ ಕಾರ್ಯಾಗಾರದಲ್ಲಿ ಅವರು ಉಪನ್ಯಾಸ ನೀಡಿದರು.




ಕಾರ್ಯಾಗಾರದಿಂದ ವಿದ್ಯಾರ್ಥಿಗಳಲ್ಲಿರುವ ಪರೀಕ್ಷಾ ಭಯ ಹೊರಟು ಹೋಗಿ ಉತ್ತಮವಾದ ಫಲಿತಾಂಶವನ್ನು ಪಡೆಯುವದರಲ್ಲಿ ಎರಡು ಮಾತಿಲ್ಲ. ಕಾರಣ, ಪರೀಕ್ಷೆಗಳ ಭಯದಿಂದ ಹೊರಬರುವ ರಹದಾರಿಯೇ ಕಾರ್ಯಾಗಾರ ಎಂದು ಹೇಳಿದ ಅವರು, ಕಠಿಣವಾದ ಪ್ರಶ್ನೆಗಳಿಗೆ ಹೇಗೆ ಉತ್ತರಿಸಬೇಕು ಮತ್ತು ಉತ್ತರ ಪತ್ರಿಕೆ ಮೌಲ್ಯಮಾಪಕರಿಗೆ ಆಕರ್ಷಕವಾಗಿ ಕಾಣಲು ಯಾವ ಹಂತವನ್ನು ಅನುಸರಿಸಿದರೆ ಉತ್ತಮ ಎಂಬುದನ್ನು ತಿಳಿಸುತ್ತಾ ವಾರ್ಷಿಕ ಪರೀಕ್ಷೆಯ ತಯಾರಿ ಹೇಗೆ ಇರಬೇಕು ಎಂಬುದನ್ನು ಇಲಾಖೆಯ ಮಾದರಿ ಪ್ರಶ್ನೆ ಪತ್ರಿಕೆಯೊಂದಿಗೆ ವಿದ್ಯಾರ್ಥಿಗಳಲ್ಲಿರುವ ಕೆಲವು ಗೊಂದಲ ಹಾಗೂ ಪರೀಕ್ಷೆಯ ತಯಾರಿಯಲ್ಲಿರುವ ವಿದ್ಯಾರ್ಥಿಗಳ ದಿನದ ವೇಳಾ ಪತ್ರಿಕೆ ಹೇಗೆ ಇರಬೇಕು ಹಾಗೂ ಅದರಿಂದ ಸಿಗುವ ಲಾಭವನ್ನು ವಿವರಿಸಿದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಪ್ರಕಾಶ್ ಬರದೂರ ಮಾತನಾಡಿ, ಇಲಾಖೆಯ ನಿಯಮದಂತೆ ಸಂಪನ್ಮೂಲ ವ್ಯಕ್ತಿಗಳಿಂದ ಉತ್ತಮ ಜ್ಞಾನವನ್ನು ಪಡೆದು ನಮ್ಮ ಕಾಲೇಜಿಗೆ ಉತ್ತಮ ಫಲಿತಾಂಶ ನೀಡುವದರೊಂದಿಗೆ ತಮ್ಮ ಭವಿಷ್ಯ ಉತ್ತಮವಾಗಿ ರೂಪಿಸಿಕೊಳ್ಳಿ ಎಂದು ಸಲಹೆ ನೀಡಿದರು.

ಉಪನ್ಯಾಸಕರಾದ ಎಂ.ಜಿ. ಪಾತ್ರೋಡಿ, ಟಿ.ಎಸ್. ಮಂದಾಲಿ, ಎಸ್.ಕೆ. ನದಾಫ್, ಕುಮಾರ್ ಸಣ್ಣಕ್ಕೆ ಉಪಸ್ಥಿತರಿದ್ದರು. ಕನ್ನಡ ಉಪನ್ಯಾಸಕ ಎಂ.ಜಿ. ಹಿರೇಮಠ್ ನಿರೂಪಿಸಿದರು. ಎಂ.ಜಿ. ಪಾಟೀಲ ವಂದಿಸಿದರು.

# ಪ್ರಧಾನಿಗಳನ್ನು ಭೇಟಿಯಾದ ಸಂಸದ ಜಗದೀಶ ಶೆಟ್ಟರ



**■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

ಬೆಳಗಾವಿ ಲೋಕಸಭಾ ಸದಸ್ಯರು ಹಾಗೂ ರಾಜ್ಯದ ಮಾಜಿ ಮುಖ್ಯಮಂತ್ರಿಗಳಾದ ಜಗದೀಶ ಶೆಟ್ಟರ ನವದೆಹಲಿಯಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರನ್ನು ಸೌಹಾರ್ದಯುತವಾಗಿ ಭೇಟಿ ಮಾಡಿ, ನೂತನ ವರ್ಷದ ಶುಭಾಶಯ ಕೋರಿದರು.

ಪ್ರಥಮ ಬಾರಿಗೆ ಸಂಸದರಾಗಿ ಆಯ್ಕೆಯಾದ ಹಿನ್ನೆಲೆಯಲ್ಲಿ ಪ್ರಧಾನಮಂತ್ರಿಗಳು ಚುನಾವಣೆಯ ಸಂದರ್ಭದಲ್ಲಿ ಸ್ವತಃ ಬೆಳಗಾವಿ ನಗರಕ್ಕೆ ಆಗಮಿಸಿ, ಅತ್ಯುತ್ತಮ ಸಹಕಾರ ನೀಡಿದ್ದನ್ನು ಸಂಸದರು ಸ್ಮರಿಸಿದರು. ಸಂಸದರು ಸನ್ಮಾನಿಸಲು ಹೋದಾಗ ನಾನು ಸಾಮಾನ್ಯ ಕಾರ್ಯಕರ್ತ ಸನ್ಮಾನ ಬೇಡ ಎಂದು ಕುಟುಂಬದ ಆತ್ಮೀಯ ಸದಸ್ಯರಂತೆ ಸಂಸದರ ಕುಶಲೋಪರಿಯನ್ನು ಪ್ರಧಾನಮಂತ್ರಿಗಳು ವಿಚಾರಿಸಿದರು.

ಈ ಸಮಯದಲ್ಲಿ ಸಂಸದರು ಸವದತ್ತಿಯ ಶ್ರೀ ಕ್ಷೇತ್ರ ಶ್ರೀ ರೇಣುಕಾ ಎಲ್ಲಮ್ಮ ದೇವಿ ದೇವಸ್ಥಾನದ ಅಭಿವೃದ್ಧಿಗೆ 100 ಕೋಟಿ ರೂಪಾಯಿ ಅನುದಾನ ಬಿಡುಗಡೆ ಮಾಡಿದ್ದಕ್ಕೆ ನರೇಂದ್ರ ಮೋದಿಯವರಿಗೆ ಧನ್ಯವಾದಗಳನ್ನು ತಿಳಿಸಿ, ಅದೇ ರೀತಿಯಲ್ಲಿ ರಾಮದುರ್ಗದಲ್ಲಿರುವ ಐತಿಹಾಸಿಕ ಶಬರಿ ಕೊಳ್ಳವನ್ನು ಸಹ ಅಭಿವೃದ್ಧಿಪಡಿಸುವಂತೆ ವಿನಂತಿಸಿದರು. ಬೆಂಗಳೂರು-ಧಾರವಾಡದ ನಡುವೆ ಸದ್ಯ ಸಂಚರಿಸುತ್ತಿರುವ ವಂದೇ ಭಾರತ ಎಕ್ಸ್‌ಪ್ರೆಸ್ ರೈಲು ಸಂಚಾರವನ್ನು ಬೆಳಗಾವಿಯವರೆಗೆ ವಿಸ್ತರಿಸಿ ಬೆಳಗಾವಿ ಜಿಲ್ಲಾ ನಿವಾಸಿಗಳ ಅನೇಕ ದಿನಗಳ ಬೇಡಿಕೆಯನ್ನು ಪರಿಗಣಿಸುವಂತೆ ವಿನಂತಿಸಿದರು.

ಬೇಡಿಕೆಯನ್ನು ಅವಲೋಕಿಸಿದ ಪ್ರಧಾನಿ ನರೇಂದ್ರ ಮೋದಿಯವರು ಇದನ್ನು ಈಡೇರಿಸುವ ಬಗ್ಗೆ ಕೇಂದ್ರ ರೈಲ್ವೆ ಸಚಿವರಿಗೆ ಸೂಚಿಸುವ ಕುರಿತು ಭರವಸೆಯನ್ನು ನೀಡಿರುವುದಾಗಿ ಸಂಸದ ಜಗದೀಶ ಶೆಟ್ಟರ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 'ಹರಿಹರ ಚಲೋ' ಪೂರ್ವಭಾವಿ ಸಭೆ ಇಂದು

**■ ವಿಜಯಸಾಕ್ಷಿ ಸುದ್ದಿ, ಗದಗ**

ದಾವಣಗೇರೆ ಜಿಲ್ಲೆಯ ಹರಿಹರದಲ್ಲಿರುವ ವೀರಶೈವ ಲಿಂಗಾಯತ ಪಂಚಮಸಾಲಿ ಪೀಠದಲ್ಲಿ ಜ. 14 ಮತ್ತು 15ರಂದು ನಡೆಯಲಿರುವ ಹರಜಾತ್ರೆಯಲ್ಲಿ ಪಂಚಮಸಾಲಿ ಸಮಾಜಕ್ಕೆ ಮೀಸಲಾತಿ ಕೊಡಲಾಗದು ಎಂದು ಹೇಳಿಕೆ ನೀಡಿರುವ ಪಂಚಮಸಾಲಿ ವಿರೋಧಿ ಮುಖ್ಯಮಂತ್ರಿಯನ್ನು ಹಾಗೂ ಸಚಿವ ಸಂಪುಟದ ಮಂತ್ರಿಗಳನ್ನು ಆಹ್ವಾನಿಸಿ ಅವರನ್ನು ಸತ್ಕರಿಸುವ ಕಾರ್ಯಕ್ರಮವನ್ನು ಆಯೋಜನೆ ಮಾಡಿರುವ ಶ್ರೀಪೀಠದ ನಡೆಗೆ ಗದಗ ಜಿಲ್ಲಾ ಪಂಚಮಸಾಲಿ ಸಮಾಜ ವಿರೋಧ ವ್ಯಕ್ತಪಡಿಸಿದೆ.

ಜೊತೆಗೆ ಹರಿಹರ ಚಲೋ ಕಾರ್ಯಕ್ರಮದ ಕುರಿತು ಜ.12ರಂದು ಬೆಳಿಗ್ಗೆ 11ಕ್ಕೆ ನಗರದ ಪ್ರವಾಸಿ ಮಂದಿರದಲ್ಲಿ ಪೂರ್ವಭಾವಿ ಸಭೆಯನ್ನು ಕರೆಯಲಾಗಿದ್ದು, ಈ ಸಭೆಗೆ ಗದಗ ಜಿಲ್ಲೆಯ ಎಲ್ಲ ಪಂಚಮಸಾಲಿ ಸಮಾಜ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ತಮ್ಮ ಮಾರ್ಗದರ್ಶನವನ್ನು ನೀಡಬೇಕೆಂದು ಪಂಚಮಸಾಲಿ ಪಂಚಸೇನೆಯ ರಾಜ್ಯ ಪ್ರಧಾನ ಕಾರ್ಯದರ್ಶಿ ಬಸವರಾಜ ಮನಗುಂಡಿ ಹಾಗೂ ಗದಗ ಜಿಲ್ಲಾ ಯುವ ಘಟಕದ ಜಿಲ್ಲಾಧ್ಯಕ್ಷ ಅಯ್ಯಪ್ಪ ಅಂಗಡಿ ಪ್ರಕಟಣೆಯ ಮೂಲಕ ವಿನಂತಿಸಿದ್ದಾರೆ.

# 'ವಚನ ದರ್ಶನ' ಪಾದಯಾತ್ರೆ



**■ ವಿಜಯಸಾಕ್ಷಿ ಸುದ್ದಿ, ಗದಗ**

ತಾಲೂಕಿನ ಶ್ರೀಕ್ಷೇತ್ರ ಹರ್ತಿ ಗ್ರಾಮದಲ್ಲಿ 'ವಚನ ದರ್ಶನ' ಆಧ್ಯಾತ್ಮಿಕ ಪ್ರವಚನದ ಅಂಗವಾಗಿ ಹಿರೇವಡ್ಡಟ್ಟಿ - ಮಣಕವಾಡ ದೇವಮಂದಿರ ಮಹಾಮಠದ ಪೂಜ್ಯಶ್ರೀ ಅಭಿನವ ಮೃತ್ಯುಂಜಯ ಮಹಾಸ್ವಾಮಿಗಳು ಹರ್ತಿ ಗ್ರಾಮ ಸೇರಿದಂತೆ ಕಣವಿ, ಹೊಸೂರು, ಸೊರಟೂರ, ನಾಗಾವಿ, ಯಲಿಶಿರುಂದ, ಕುರ್ತಕೋಟಿ, ಚಿಂಚಲಿ ಗ್ರಾಮಗಳಲ್ಲಿ ಜನಜಾಗೃತಿ ಪಾದಯಾತ್ರೆ ನಡೆಸಿದರು.

ಈ ಪಾದಯಾತ್ರೆಯುದ್ದಕ್ಕೂ ಬೆಳಗಿನ ಜಾವದಲ್ಲಿ ರಸ್ತೆಯ ತುಂಬಾ ರಂಗೋಲಿ, ಮನೆಗಳಿಗೆ ತಳಿರು-ತೋರಣ ಮತ್ತು ದೀಪಗಳಿಂದ ಶೃಂಗರಿಸಿ ಡೊಳ್ಳು, ನಂದಿಕೋಲು, ಭಜನೆ ಮೂಲಕ ಶ್ರೀಗಳನ್ನು ಸಾವಿರಾರು ಭಕ್ತರು ಭಕ್ತಿ-ಭಾವದಿಂದ ಬರಮಾಡಿಕೊಂಡು ಪಾದಯಾತ್ರೆಯನ್ನು ಯಶಸ್ವಿಗೊಳಿಸಿದರು.

ಈ ಸಂದರ್ಭದಲ್ಲಿ ಪೂಜ್ಯ ಶ್ರೀಗಳು ಆಶೀರ್ವಚನ ನೀಡಿ, ತೋಳ್ಬಲವನ್ನು ಶಕ್ತಿಗಾಗಿ ಪ್ರದರ್ಶನ ಮಾಡದೆ, ಭಕ್ತಿಗಾಗಿ ಪ್ರದರ್ಶನ ಮಾಡಿ ಜನರ ಮನಸ್ಸು ಗೆಲ್ಲಬೇಕು. ದುಶ್ಚಟಗಳನ್ನು ತ್ಯಜಿಸಿ ಮಕ್ಕಳಿಗೆ ಉತ್ತಮ ಶಿಕ್ಷಣ, ಸಂಸ್ಕಾರ ನೀಡಿ ಸುಂದರ ಸಮಾಜ ಕಟ್ಟಬೇಕು. ತಂದೆ-ತಾಯಿ, ಗುರು-ಹಿರಿಯರನ್ನು ಗೌರವದಿಂದ ಕಾಣಬೇಕೆಂದು ನುಡಿದರು.

ಪಾದಯಾತ್ರೆ ಸಂಘಟನೆಯ ಉಸ್ತುವಾರಿ ಶಿವಲಿಂಗ ಶಾಸ್ತ್ರಿಗಳು ಸಿದ್ದಾಪೂರ ಶಾಂತಿ ಮಂತ್ರದೊಂದಿಗೆ ಕಾರ್ಯಕ್ರಮ ಯಶಸ್ವಿಗೊಳಿಸಿದರು.

**ಮೌನ ಪೂಜಾನುಷ್ಠಾನ ಮಂಗಲ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು**

# ಆಧ್ಯಾತ್ಮ ಸಾಧನೆಯಿಂದ ನೆಮ್ಮದಿ ಸಾಧ್ಯ

**■ ವಿಜಯಸಾಕ್ಷಿ ಸುದ್ದಿ, ಅಜ್ಜಂಪುರ**

ಮಾನವ ಜೀವನದ ಶ್ರೇಯಸ್ಸಿಗೆ ಮತ್ತು ಉನ್ನತಿಗೆ ಧರ್ಮಾಚರಣೆ ಅಗತ್ಯ. ಭೌತಿಕ ಸಂಪತ್ತಿನಿಂದ ಶಾಂತಿ ಸಿಗದು. ಆಧ್ಯಾತ್ಮ ಸಾಧನೆಯಿಂದ ಮಾತ್ರ ನೆಮ್ಮದಿ ಸಾಧ್ಯ. ತಪಶ್ಚರ್ಯದಿಂದ ಆತ್ಮಬಲ ಸಂವೃದ್ಧಿಯಾಗುತ್ತದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶನಿವಾರ ಬುಕ್ಕಾಂಬುಧಿ ತಪೋಬೆಟ್ಟದಲ್ಲಿ ಕವಲೇದುರ್ಗದ ಮರುಳಸಿದ್ಧ ಶಿವಾಚಾರ್ಯ ಸ್ವಾಮಿಗಳು ಕೈಗೊಂಡ ಮೌನ ಪೂಜಾನುಷ್ಠಾನ ಮಂಗಲ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು. ಪರಮ ತಪಸ್ವಿ ಲಿಂ. ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳು ಬುಕ್ಕಾಂಬುಧಿ ಬೆಟ್ಟದಲ್ಲಿ ಮೂರು ತಿಂಗಳ ಕಾಲ ತಪೋನುಷ್ಠಾನ ಮಾಡಿ ಜಾಗೃತಗೊಳಿಸಿದ ಪವಿತ್ರ ಕ್ಷೇತ್ರದಲ್ಲಿ ತೀರ್ಥಹಳ್ಳಿ ತಾಲೂಕಿನ ಕವಲೇದುರ್ಗ ಭುವನಗಿರಿ ಸಂಸ್ಥಾನ ಮಠದ ಮರುಳಸಿದ್ಧ ಶಿವಾಚಾರ್ಯ ಸ್ವಾಮಿಗಳು 11 ದಿನಗಳ ಮೌನ ತಪೋನುಷ್ಠಾನ ಕೈಗೊಂಡು ಇಂದು ಮಂಗಲಗೊಳಿಸುತ್ತಿರುವುದು ಸಂತೋಷದ ಸಂಗತಿ. ಶಿವತಪ, ಶಿವಕರ್ಮ, ಶಿವಜಪ, ಶಿವಧ್ಯಾನ ಮತ್ತು ಶಿವಜ್ಞಾನ ಎಂಬ ಪಂಚ ಯಜ್ಞಗಳ ಮೂಲಕ ಶಿವನನ್ನು ಪೂಜಿಸುವ, ಧ್ಯಾನಿಸುವ ವಿಚಾರವನ್ನು ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ್ದಾರೆ. ಲೋಕ ಕಲ್ಯಾಣ ಆತ್ಮಬಲ ವೃದ್ಧಿಗಾಗಿ ಕೈಗೊಂಡ ಅನುಷ್ಠಾನ ಭಕ್ತ ಸಂಕುಲಕ್ಕೆ ಹರುಷ ತಂದಿದೆ ಎಂದರು.



ಈ ಸಂದರ್ಭದಲ್ಲಿ ಕವಲೇದುರ್ಗ ಅನುಷ್ಠಾನ ಶ್ರೀಗಳಿಗೆ ರೇಶ್ಮೆ ಮಡಿ ಫಲ ಪುಷ್ಪವಿತ್ತು ಶ್ರೀ ರಂಭಾಪುರಿ ಜಗದ್ಗುರುಗಳು ಶುಭ ಹಾರೈಸಿದರು. ಶ್ರೀಗಳವರ ಮಾರ್ಗದರ್ಶನದಲ್ಲಿ ಹಳೇಹುಬ್ಬಳ್ಳಿ ಪಂಚಗೃಹ ಹಿರೇಮಠದ ನಿಯೋಜಿತ ಉತ್ತರಾಧಿಕಾರಿಗಳಾದ ರೇಣುಕ ಪ್ರಸಾದ ಅವರು ಕೂಡಾ 11 ದಿನಗಳ ವಿಶೇಷ ಪೂಜೆ ಕೈಗೊಂಡಿದ್ದರು. ಶ್ರೀ ಪೀಠದಿಂದ ಅವರಿಗೂ ರೇಶ್ಮೆ ಶಾಲು ಸ್ಮರಣಿಕೆ ನೀಡಿ ಶ್ರೀ ರಂಭಾಪುರಿ ಜಗದ್ಗುರುಗಳು ಆಶೀರ್ವದಿಸಿದರು.

ಶ್ರೀ ಮದುಜ್ಜಯಿನಿ ಜಗದ್ಗುರು ಸಿದ್ಧಲಿಂಗ ಶಿವಾಚಾರ್ಯ ಟ್ರಸ್ಟಿನ ಉಪಾಧ್ಯಕ್ಷ ಎಸ್.ಎಮ್. ವೀರಭದ್ರಪ್ಪ, ಕಾರ್ಯದರ್ಶಿ ಹೆಚ್.ಪಿ. ಸುರೇಶ, ಚಿಕ್ಕತೊಗಲೇರಿಯ ಈಶಣ್ಣ, ದಾವಣಗೆರೆ ಕೊಟ್ರೇಶ್ ಮೊದಲ್ಗೊಂಡು ಟ್ರಸ್ಟಿನ ಎಲ್ಲ ಸದಸ್ಯರು ಮತ್ತು ಶಾಂಭವಿ ಮಹಿಳಾ ಮಂಡಳದ ಸದಸ್ಯರು ಉಪಸ್ಥಿತರಿದ್ದು ಶ್ರೀಗಳಿಗೆ ಗೌರವ ಸಮರ್ಪಿಸಿದರು.

ತಾವರೆಕೆರೆ ಶಿಲಾಮಠದ ಡಾ.ಅಭಿನವ ಸಿದ್ಧಲಿಂಗ ಶಿವಾಚಾರ್ಯ ಸ್ವಾಮಿಗಳು ನಿರೂಪಿಸಿದರು. ಸಮಾರಂಭದಲ್ಲಿ ಅಸಂಖ್ಯಾತ ಭಕ್ತರು ಪಾಲ್ಗೊಂಡಿದ್ದರು. ಆಗಮಿಸಿದ ಸಮಸ್ತರಿಗೂ ಅನ್ನ ದಾಸೋಹದ ವ್ಯವಸ್ಥೆ ಮಾಡಲಾಗಿತ್ತು.

> ಪೂಜಾನುಷ್ಠಾನ ಮಂಗಲಗೊಳಿಸಿದ ಕವಲೇದುರ್ಗದ ಮರುಳಸಿದ್ಧ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಯಾವುದೋ ಜನ್ಮದ ಪುಣ್ಯದ ಫಲದಿಂದ ಲಿಂ. ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳು ತಪಗೈದ ಈ ಕ್ಷೇತ್ರದಲ್ಲಿ ಪೂಜಾನುಷ್ಠಾನ ಮಾಡಿರುವುದು ನಮಗೆ ಒಂದು ವಿಶೇಷ ಆತ್ಮಬಲ ಮತ್ತು ಮನಃಶಾಂತಿ ಕಂಡಿದೆ. ಪೂರ್ವಜರು ಹಾಕಿದ ಹೆದ್ದಾರಿಯಲ್ಲಿ ನಡೆದು ಭಕ್ತ ಸಮುದಾಯಕ್ಕೆ ಸನ್ಮಾರ್ಗದರ್ಶನ ಮಾಡಬೇಕೆಂಬುದೇ ನಮ್ಮ ಧ್ಯೇಯವೆಂದರು.

# ಚುನಾವಣಾ ದಿನಾಂಕ ನಿಗದಿಪಡಿಸಲು ಮನವಿ

**■ ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ನಗರಸಭೆ ಅಧ್ಯಕ್ಷ, ಉಪಾಧ್ಯಕ್ಷರ ಚುನಾವಣಾ ದಿನಾಂಕವನ್ನು ನಿಗದಿ ಮಾಡುವಂತೆ ಗದಗ ಜಿಲ್ಲಾ ಬಿಜೆಪಿ ಅಧ್ಯಕ್ಷ ತೋಟಪ್ಪ (ರಾಜು) ಕುರಡಗಿ ನೇತೃತ್ವದಲ್ಲಿ ಗದಗ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.



ಮನವಿ ಸಲ್ಲಿಸಿ ಮಾತನಾಡಿದ ರಾಜು ಕುರಡಗಿ, ಗದಗ-ಬೆಟಗೇರಿ ನಗರಸಭೆ ಅಧ್ಯಕ್ಷ, ಉಪಾಧ್ಯಕ್ಷರ ಚುನಾವಣೆಗೆ ಹೈಕೋರ್ಟ್ ಸಮ್ಮತಿ ನೀಡಿದೆ. ಆದಷ್ಟು ಬೇಗ ದಿನಾಂಕವನ್ನು ನಿಗದಿಪಡಿಸಿ ಚುನಾವಣೆ ನಡೆಸಿ ಗದಗ-ಬೆಟಗೇರಿ ಅವಳಿ ನಗರದ ಮೂಲಭೂತ ಸೌಕರ್ಯಗಳನ್ನು ಸಕಾಲಕ್ಕೆ ಒದಗಿಸಲು ಅನುವು ಮಾಡಿಕೊಡಬೇಕೆಂದು ವಿನಂತಿಸಿಕೊಂಡರು.

ಈ ಸಂದರ್ಭದಲ್ಲಿ ವಿನಾಯಕ ಮಾನ್ವಿ, ರಾಘು ಯಳವತ್ತಿ, ಪ್ರಕಾಶ ಅಂಗಡಿ, ಮುತ್ತಣ್ಣ ಮುಶಿಗೇರಿ, ನಾಗರಾಜ ತಳವಾರ, ಮಹೇಶ ದಾಸರ, ಉಷಾ ದಾಸರ, ವಿದ್ಯಾವತಿ ಗಡಗಿ, ಲಕ್ಷ್ಮೀ ಕಾಕಿ, ವಿಜಯಲಕ್ಷ್ಮೀ ದಿಂಡೂರ, ಶಶಿಧರ ದಿಂಡೂರ, ಮಹಾಂತೇಶ ನೆಲವಡಿ ಉಪಸ್ಥಿತರಿದ್ದರು.

# ಖಾಸಗಿ ಫೈನಾನ್ಸ್ ಕಂಪನಿ ಕಿರುಕುಳಕ್ಕೆ ಊರು ತೊರೆದ ಜನ!

**■ ವಿಜಯಸಾಕ್ಷಿ ಸುದ್ದಿ, ಚಾಮರಾಜನಗರ**

ಖಾಸಗಿ ಮೈಕ್ರೋ ಫೈನಾನ್ಸ್ ಕಂಪನಿಯ ಕಿರುಕುಳ ತಾಳಲಾರದೆ ಚಾಮರಾಜನಗರ ಜಿಲ್ಲೆಯ ಹೆಗ್ಗವಾಡಿಪುರ, ದೇಶವಳ್ಳಿ ಸೇರಿದಂತೆ ಹಲವೆಡೆಗಳಲ್ಲಿ ಜನರು ಮನೆಗಳನ್ನೇ ತೊರೆದಿದ್ದಾರೆ ಎಂದು ವರದಿಯಾಗಿದೆ.

ಪಡೆದಿರುವ ಸಾಲವನ್ನು ಸರಿಯಾದ ಸಮಯಕ್ಕೆ ಮರುಪಾವತಿಸಿಲ್ಲ ಎಂದು ಮೈಕ್ರೋ ಫೈನಾನ್ಸ್ ಕಂಪನಿಗಳ ಏಜೆಂಟರು ಕಿರುಕುಳ ನೀಡುತ್ತಿದ್ದಾರೆ. ಇದರಿಂದ ಹಲವು ಕುಟುಂಬಗಳು ಮನೆಗೆ ಬೀಗ ಹಾಕಿ, ಊರು ಬಿಟ್ಟು ಹೋಗಿವೆ ಎಂದು ದಿ ನ್ಯೂ ಇಂಡಿಯನ್ ಎಕ್ಸ್‌ಪ್ರೆಸ್ ವರದಿ ಮಾಡಿದೆ.

ಕೆಲ ಮಕ್ಕಳು ತಮ್ಮ ಶಿಕ್ಷಣವನ್ನೂ ಅರ್ಧದಲ್ಲಿ ನಿಲ್ಲಿಸಿ ತಮ್ಮ ಪೋಷಕರೊಂದಿಗೆ ಬೇರೆ ಜಿಲ್ಲೆ, ರಾಜ್ಯಗಳಿಗೆ ತೋಟದ ಕೆಲಸಕ್ಕೆ ಹೋಗಿದ್ದಾರೆ. ಮೋಹನ್ ಎಂಬ ವಿದ್ಯಾರ್ಥಿಯೊಬ್ಬ ತಂದೆ ಮಾಡಿದ ಸಾಲ ತೀರಿಸುವ ಸಲುವಾಗಿ ತನ್ನ ಕಿಡ್ನಿ ಮಾರಲು ಅನುವು ಮಾಡಿಕೊಡುವಂತೆ ಸರ್ಕಾರಕ್ಕೆ ಮನವಿ ಮಾಡಿದ್ದಾನೆ. ಫೈನಾನ್ಸ್ ಏಜೆಂಟ್ ಈತನ ಮನೆಗೆ ಬಂದು ಅಶ್ಲೀಲ ಪದ ಬಳಸಿ ತಾಯಿಗೆ ನಿಂದಿಸಿದ್ದ. ಇದರಿಂದ ಬೇಸತ್ತು ಕಿಡ್ನಿ ಮಾರಲು ಮುಂದಾಗಿದ್ದಾನೆ ಎಂದು ವರದಿ ವಿವರಿಸಿದೆ.

**ಲಕ್ಷ್ಮೇಶ್ವರದ ಶ್ರೀ ವೆಂಕಟೇಶ್ವರ ದೇವಸ್ಥಾನದಲ್ಲಿ ವಿಶೇಷ ಪೂಜೆ, ಧಾರ್ಮಿಕ ಆಚರಣೆ**

# ಭಕ್ತಿಪೂರ್ಣ ವೈಕುಂಠ ಏಕಾದಶಿ ಆಚರಣೆ

**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**


ಹಿಂದೂಗಳಿಗೆ ಶ್ರೇಷ್ಠವಾದ ವೈಕುಂಠ ಏಕಾದಶಿಯಂದು ಶುಕ್ರವಾರ ಪಟ್ಟಣದ ಸವಣೂರ ರಸ್ತೆಯಲ್ಲಿ ಶ್ರೀ ವೆಂಕಟೇಶ್ವರ ದೇವಸ್ಥಾನದಲ್ಲಿ ವಿಶೇಷ ಪೂಜೆ, ಧಾರ್ಮಿಕ ಆಚರಣೆ-ಸಂಪ್ರದಾಯಗಳು ನೆರವೇರಿದವು.

ಪಟ್ಟಣದ ಅಗಡಿ ಇಂಜಿನಿಯರಿಂಗ್ ಕಾಲೇಜಿನ ಸಂಸ್ಥಾಪಕರಾದ ದಿ. ಮೈಲಾರಪ್ಪ ಅಗಡಿ ಕುಟುಂಬದಿಂದ ತಿರುಪತಿ ವೆಂಕಟೇಶ್ವರ ದೇವಸ್ಥಾನದ ಮಾದರಿಯಲ್ಲಿಯೇ ನಿರ್ಮಿತವಾದ ದೇವಸ್ಥಾನದಲ್ಲಿ ಬೆಳಿಗ್ಗೆಯಿಂದಲೇ ಶ್ರೀ ವೆಂಕಟೇಶ್ವರ ಮೂರ್ತಿಗೆ ಅಭಿಷೇಕ, ವಿಶೇಷ ಅಲಂಕಾರ, ಮಹಾಮಂಗಳಾರತಿ, ಅಲಂಕೃತ ವೈಕುಂಠ ದ್ವಾರದಿಂದ ನಿರ್ಗಮನ ಹಾಗೂ ಪ್ರಸಾದ ಸೇವೆ ಹಾಗೂ ಸಂಜೆ ಶಾರದಾ ಸ್ವರಾಂಜಲಿ ಸಂಗೀತ ಪಾಠಶಾಲೆ ಹಾಗೂ ಅಗಡಿ ಕಾಲೇಜಿನ ವಿದ್ಯಾರ್ಥಿಗಳಿಂದ ಸಂಗೀತ ಕಾರ್ಯಕ್ರಮ, ವೆಂಕಟೇಶ್ವರ ಉತ್ಸವ ಮೂರ್ತಿಯ ಪಲ್ಲಕ್ಕಿ ಸೇವೆ ನೆರವೇರಿತು.

ವೈಕುಂಠ ಏಕಾದಶಿಯಂದು ವಿಷ್ಣುವಿನ ರೂಪದ ಶ್ರೀ ವೆಂಕಟೇಶ್ವರನ ದರ್ಶನ ಮಾಡುವದರಿಂದ ಕಷ್ಟ ಕಾರ್ಪಣ್ಯಗಳು ಕಳೆದು ನೆಮ್ಮದಿ, ಶಾಂತಿ, ಪುಣ್ಯ ಪ್ರಾಪ್ತಿಯಾಗುತ್ತದೆ ಎನ್ನುವ ಪ್ರತೀತಿಯಿದೆ.

ಈ ಹಿನ್ನೆಲೆಯಲ್ಲಿ ಪಟ್ಟಣ ಸೇರಿ ಸುತ್ತಲಿನ ಗ್ರಾಮಗಳ ಭಕ್ತರು ವೆಂಕಟೇಶ್ವರ ದೇವಸ್ಥಾನಕ್ಕೆ ಬಂದು ದರ್ಶನಾಶೀರ್ವಾದ ಪಡೆದರು. ಭಾವಸಾರ ಕ್ಷತ್ರೀಯ ಸಮಾಜದಿಂದ ಭಗವದ್ಗೀತಾ ಶ್ರೀ ಜ್ಞಾನೇಶ್ವರಿ 9 ಮತ್ತು 12ನೇ ಅಧ್ಯಾಯ ಪರಾಯಣ ನೆರವೇರಿತು.

2012ರಲ್ಲಿ ತಮಿಳುನಾಡಿನ ಉತ್ಕೃಷ್ಟ ಶಿಲೆಗಳಿಂದ ನಿರ್ಮಾಣಗೊಂಡ ಈ ಬೃಹತ್ ದೇವಸ್ಥಾನದ ಸುತ್ತಲೂ ಇರುವ ಶ್ರೀದೇವಿ, ಭೂದೇವಿ, ಗಣಪತಿ, ಮೈಲಾರಲಿಂಗೇಶ್ವರ, ನಾಗದೇವತೆಗಳ ಮಂಟಪಗಳಲ್ಲಿನ ಮೂರ್ತಿಗಳಿಗೆ ವಿಶೇಷ ಪೂಜಾ ಅಲಂಕಾರ ನೆರವೇರಿಸಲಾಗಿತ್ತು. ಲಕ್ಷ್ಮೇಶ್ವರ ಸೇರಿ ಸುತ್ತಲಿನ ಗ್ರಾಮಗಳ ಅಪಾರ ಭಕ್ತರು ದೇವಸ್ಥಾನಕ್ಕೆ ಆಗಮಿಸಿದ್ದರು.



ಅಗಡಿ ಇಂಜಿನಿಯರಿಂಗ್ ಕಾಲೇಜಿನ ಪ್ರಾಚಾರ್ಯ ಡಾ. ಪರಶುರಾಮ ಬಾರ್ಕಿ, ದೇವಸ್ಥಾನದ ಆಡಳಿತ ಮಂಡಳಿಯ ಅರುಣಕುಮಾರ ಜ್ಯೋಶಿ, ವ್ಯವಸ್ಥಾಪಕ ರಮೇಶ ಬಾವಿಕಟ್ಟಿ ಹಾಗೂ ಆಡಳಿತ ಮಂಡಳಿಯ ನೇತೃತ್ವದಲ್ಲಿ ಪೂಜಾ ಕೈಂಕರ್ಯಗಳು ನೆರವೇರಿದವು.

> ವೈಕುಂಠ ಏಕಾದಶಿಯ ದಿನ ಉಪವಾಸ ವೃತಾಚರಣೆಯಿಂದ ವಿಷ್ಣುವಿನ ದರ್ಶನ ಪಡೆದರೆ ಮೋಕ್ಷ ಪ್ರಾಪ್ತಿಯಾಗುತ್ತದೆ. ಅಲ್ಲದೇ ಮಹಾ ವಿಷ್ಣುವು ಪ್ರಸನ್ನತೆಯಿಂದ ಹರಸುತ್ತಾನೆ ಮತ್ತು ಕಷ್ಟಗಳು ಕಳೆದು ಸುಖ-ಸಂತೋಷ ಲಭಿಸುತ್ತದೆ. ಶ್ರೀ ವೆಂಕಟೇಶ್ವರನ ದರ್ಶನ ಪಡೆದು ಮತ್ತು ವೈಕುಂಠ ದ್ವಾರದಿಂದ ನಿರ್ಗಮನಗೊಂಡವರಿಗೆ ಮೋಕ್ಷ ಸಿಗುತ್ತದೆ. ಈ ದಿನ ಕೈಗೊಂಡ ಉಪವಾಸ ವ್ರತವು ಉಳಿದ 23 ಏಕಾದಶಿಗಳ ವ್ರತಕ್ಕೆ ಸಮನಾಗಿರುವುದು ಎಂಬ ನಂಬಿಕೆಯಿದೆ ಎಂದು ದೇವಸ್ಥಾನದ ಅರ್ಚಕ ವರದರಾಜ ವಡವಿ ಹೇಳಿದರು.




**ಬಿಂಕದಕಟ್ಟಿಯಲ್ಲಿ ಸಹಕಾರ ರತ್ನ ಎಂ.ವಿ. ಮೂಲಿಮನಿಯವರ 94ನೇ ಜಯಂತ್ಯುತ್ಸವ ಕಾರ್ಯಕ್ರಮ ಇಂದು**

# ಸಹಕಾರಿ ಸಂಘದ ರಜತ ಮಹೋತ್ಸವ ಕಾರ್ಯಕ್ರಮ

**■ ವಿಜಯಸಾಕ್ಷಿ ಸುದ್ದಿ, ಗದಗ**

ತಾಲೂಕಿನ ಬಿಂಕದಕಟ್ಟಿ ಗ್ರಾಮದಲ್ಲಿ ಪ್ರಾಥಮಿಕ ಕೃಷಿ ಸಹಕಾರಿ ಸಂಘ ನಿ. ವತಿಯಿಂದ ಸಹಕಾರ ರತ್ನ ಎಂ.ವಿ. ಮೂಲಿಮನಿ ಅವರ 94ನೇ ಜಯಂತ್ಯುತ್ಸವ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ 67ನೇ ವಾರ್ಷಿಕ ಹಾಗೂ ಹಾಲು ಉತ್ಪಾದಕರ ಸಹಕಾರಿ ಸಂಘದ ರಜತ ಮಹೋತ್ಸವ ಕಾರ್ಯಕ್ರಮ ಜ. 12ರಂದು ಸಂಜೆ 5ಕ್ಕೆ ಜರುಗಲಿದೆ.

ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಕರ್ನಾಟಕ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷ ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ ಉಗ್ರಾಣವನ್ನು ಉದ್ಘಾಟಿಸುವರು.

ಹಟ್ಟಿ ಚಿನ್ನದ ಗಣಿ ನಿಗಮದ ಅಧ್ಯಕ್ಷರು, ಶಾಸಕ ಜಿ.ಟಿ. ಪಾಟೀಲ ಸ್ಮರಣ ಸಂಚಿಕೆ ಬಿಡುಗಡೆಗೊಳಿಸುವರು. ಮಾಜಿ ಶಾಸಕ ಡಿ.ಆರ್. ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡುವರು. ನವಲಗುಂದ ಶಾಸಕ ಎನ್.ಎಚ್. ಕೋನರಡ್ಡಿ ಹೈನುಗಾರಿಕೆಗೆ ಸಾಲ ವಿತರಣೆ ಮಾಡುವರು. ಮಾಜಿ ಸಚಿವ ಬಿ.ಆರ್. ಯಾವಗಲ್ಲ ರೈತರಿಗೆ ಮ್ಯಾಟ್ ವಿತರಣೆ ಮಾಡುವರು.



ರಾಣೆಬೆನ್ನೂರು ಶಾಸಕ ಪ್ರಕಾಶ ಕೋಳಿವಾಡ ಭಾವಚಿತ್ರ ಅನಾವರಣ ಮಾಡುವರು. ಶಿಕ್ಷಣ ತಜ್ಞ ಜೆ.ಕೆ. ಜಮಾದಾರ ಸಂಸ್ಥೆ ನಡೆದು ಬಂದ ದಾರಿಯ ಕುರಿತು ಉಪನ್ಯಾಸ ನೀಡುವರು.

ಸಹಕಾರ ರತ್ನ ಪುರಸ್ಕೃತರಾದ ಕೆ.ಎಲ್. ಪಾಟೀಲ, ಎಚ್.ಜಿ. ಹಿರೇಗೌಡರ, ಅಕಾಡೆಮಿಕ್ ಎಂಟರ್‌ಪ್ರೆನ್ಯೂರ್‌ಶಿಪ್ ಎಕ್ಸಲೆನ್ಸ್ ಪ್ರಶಸ್ತಿ ವಿಜೇತ ಎಸ್.ಆರ್. ನಾಗನೂರ ಹಾಗೂ ರಾಜ್ಯೋತ್ಸವ ಪುರಸ್ಕೃತ ಗುರಣ್ಣ ಬಳಗಾನೂರ ಅವರಿಗೆ ಸನ್ಮಾನ ಜರುಗಲಿದೆ ಎಂದು ಹಾಲು ಉತ್ಪಾದಕರ ಸಂಘದ ಅಧ್ಯಕ್ಷ ಆರ್.ವಿ. ಅಗಸನಕೊಪ್ಪ, ಉಪಾಧ್ಯಕ್ಷ ಬಸಪ್ಪ ಮಲ್ಲಪ್ಪ ಭಾವಿಕಟ್ಟಿ, ಪ್ರಾಥಮಿಕ ಸಹಕಾರ ಸಂಘ ನಿ. ಅಧ್ಯಕ್ಷ ಡಿ.ಬಿ. ತಿರ್ಲಾಪೂರ ಹಾಗೂ ಉಪಾಧ್ಯಕ್ಷ ದೇವಪ್ಪ ಯಲ್ಲಪ್ಪ ಹುಲ್ಲೋಜಿ ತಿಳಿಸಿದ್ದಾರೆ.

> ಮುಖ್ಯ ಅತಿಥಿಗಳಾಗಿ ಕೆಸಿಸಿ ಬ್ಯಾಂಕ್ ನಿರ್ದೇಶಕರಾದ ಮಲ್ಲಪ್ಪ ಕಲ್ಲುಗಡಿ, ಸಿ.ಬಿ. ದೊಡ್ಡಗೌಡ್ರು, ಜಮಾವೀತ ವುಲಾಮ ಪೀರಜಾದೆ ಅಧ್ಯಕ್ಷ ಮೌಲಾನಾ ಇನಾಯತ್‌ವುಲ್ಲಾ, ಜಿ.ಪಂ ಮಾಜಿ ಸದಸ್ಯ ರೇವಣಪ್ಪ ಕೊಂಡಿಕೊಪ್ಪ, ಸಹಕಾರ ಸಂಘದ ಉಪನಿಬಂಧಕಿ ಎಸ್.ಎಸ್. ಕಬಾಡೆ, ಅಸಿಸ್ಟಂಟ್ ರಜಿಸ್ಟರ್ ಪುಷ್ಪಾ ಕಡಿವಾಳರ, ಗ್ರಾ.ಪಂ ಅಧ್ಯಕ್ಷೆ ತುಳಸಾ ಶ್ರೀನಿವಾಸ ತಿಮ್ಮನಗೌಡರ, ಉಪಾಧ್ಯಕ್ಷೆ ದ್ಯಾಮವ್ವ ಹನಮಪ್ಪ ಆರಟ್ಟಿ ಪಾಲ್ಗೊಳ್ಳುವರು.


**ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ಗದಗ**

ಜಿಲ್ಲಾ : ಗದಗ. ಪಿನ್ ಕೋಡ್- 582101 ರಾಜ್ಯ : ಕರ್ನಾಟಕ
ಇ-ಮೇಲ್ apmcgadag4@gmail.com (08372) ದೂ: 238354 ಫ್ಯಾಕ್ಸ್ : 237897
ಸಂ:ಕೃಉಮಾಸ:ಗ: 638 :2024-25 ದಿನಾಂಕ: 11-01-2025

**ಪ್ರಕಟಣೆ**

ಈ ಮೂಲಕ ಯಾವತ್ತೂ ರೈತಬಾಂಧವರಿಗೆ, ಮತ್ತು ಪೇಟೆ ಕಾರ್ಯಕರ್ತರಿಗೆ ತಿಳಿಯಪಡಿಸುವದೇನೆಂದರೆ, ಮೆ। ಶ್ರೀಕಾಂತ ಏಜನ್ಸಿ ಪಾಲುದಾರರು/ಮಾಲಕರು: ಶ್ರೀ ಶಿದ್ದಿಂಗಪ್ಪ ಶಿವಪ್ಪ ಮುಳ್ಳಾಳ ಮತ್ತು ಪಾಲುದಾರರು ಸಾ॥ ಗದಗ, ಇವರು ಮುಖ್ಯ ಮಾರುಕಟ್ಟೆ ಪ್ರಾಂಗಣದಲ್ಲಿ ಹೊಂದಿರುವ ತಮ್ಮ ನಿವೇಶನ ಸಂಖ್ಯೆ 234 ಹಾಗೂ ಅದರಲ್ಲಿರುವ ಕಟ್ಟಡವನ್ನು ಮೆ। ಶ್ರೀ ವಿರಭದ್ರೇಶ್ವರ ಟ್ರೇಡರ್ಸ ಖರೀದಿದಾರರು ಸಾ॥ ಗದಗ, ಇವರಿಗೆ ಮಾರಾಟ ಮಾಡಲು ಸಮಿತಿಯ ಅನುಮತಿ ಕೋರಿರುತ್ತಾರೆ. ಕಾರಣ ಈ ಕುರಿತು ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಪ್ರಕಟಣೆ ದಿನಾಂಕದಿಂದ 15 ದಿನಗಳ ಒಳಗಾಗಿ ಸಮಿತಿಯ ಕಾರ್ಯದರ್ಶಿಯವರಿಗೆ ಲಿಖಿತ ಮೂಲಕ ಸಲ್ಲಿಸಲು ತಿಳಿಸಲಾಗಿದೆ. ನಿಗದಿತ ಅವಧಿಯ ನಂತರ ಬಂದ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

ಸಹಿ/- **ಕಾರ್ಯದರ್ಶಿ,** ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ಗದಗ

ಸಹಿ/- **ಅಧ್ಯಕ್ಷರು,** ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ಗದಗ


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka